ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 131 Friday **06-11-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 131 ಶುಕ್ರವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ರಾಗಿ ಕಾಳಿನ ಇಳುವರಿ ಕುಸಿತ; ಹುಲ್ಲಿನ ಮಾರಾಟದಿಂದ ರೈತರಿಗೆ ಕೊಂಚ ನೆಮ್ಮದಿ

ಜಗಳೂರಿನಿಂದ ಹೊರ ಜಿಲ್ಲೆಗೆ ರವಾನೆ। ಒಂದು ಪಂಡೆಗೆ 250ರಿಂದ 300, ಟ್ರ್ಯಾಕ್ಟರ್ ಲೋಡ್‌ಗೆ 12ರಿಂದ 14 ಸಾವಿರ ಬೆಲೆ

“ಮುಂಜಾನೆಯ ಮೆರಗು”

ಜಗಳೂರು ನ, 05– ಮುಂಗಾರು ಮಳೆಯ ಕೊರತೆಯಿಂದಾಗಿ ರಾಗಿ ಬೆಳೆ ಕಾಳು ಕಟ್ಟುವ ಸಂದರ್ಭದಲ್ಲಿ ಮಳೆ ಕೈ–ಕೊಟ್ಟ ಪರಿಣಾಮ ನಿರೀಕ್ಷಿತ ಪ್ರಮಾಣದಲ್ಲಿ ಕಾಳು ಇಳುವರಿ ದೊರೆಯದೆ ರೈತರು ನಷ್ಟ ಅನುಭವಿಸುವಂತಾಗಿದೆ. ಆದ–ರೆ, ರಾಗಿ ಬೆಳೆಯ ಫಸಲು ಕೈಕೊಟ್ಟರೂ ಹುಲ್ಲಿನ ಫಸಲು ರೈತರ ಕೈಹಿಡಿದಿದೆ. ತಾಲೂಕಿನಾದ್ಯಂತ ಸಮೃದ್ಧವಾಗಿ ಬೆಳೆದಿರುವ ರಾಗಿ ಹುಲ್ಲಿಗೆ ನೆರೆಯ ಜಿಲ್ಲೆಗಳಲ್ಲಿ ಭಾರಿ ಬೇಡಿಕೆ ವ್ಯಕ್ತವಾಗಿದ್ದು, ಜಗಳೂರಿನ ರಾಗಿ ಹುಲ್ಲು ಇದೀಗ ಹೊರ ಜಿಲ್ಲೆಗಳ ಜಾನುವಾರುಗಳ ಮೇವಿಗೆ ಆಸರೆಯಾಗಿದೆ.

ತಾಲೂಕಿನಲ್ಲಿ ಪ್ರಸಕ್ತ ವರ್ಷ ಸುಮಾರು 20 ಸಾವಿರಕ್ಕೂ ಅಧಿಕ ಹೆಕ್ಟೇರ್ ಪ್ರದೇಶದಲ್ಲಿ ರಾಗಿ ಬಿತ್ತನೆ ಮಾಡಲಾಗಿತ್ತು. ಆರಂಭದಲ್ಲಿ ಬೆಳೆ ಉತ್ತಮವಾಗಿ ಬೆಳೆದಿದ್ದರೂ, ಕಾಳು ಕಟ್ಟುವ ನಿರ್ಣಾಯಕ ಹಂತದಲ್ಲಿ ಮಳೆಯ ಅಭಾವ ಎದುರಾದ ಕಾರಣ ರಾಗಿ ತೆನೆಗಳಲ್ಲಿ ಸಮರ್ಪಕವಾಗಿ ಕಾಳು ತುಂಬಲಿಲ್ಲ. ಇದರಿಂದ ರೈತರಿಗೆ ನಿರೀಕ್ಷಿತ ಪ್ರಮಾಣದ ರಾಗಿ ಕಾಳು ದೊರೆಯದೆ ನಿರಾಸೆಯಾಗಿದೆ. ಆದರೆ, ಮಳೆಯ ಕೊರತೆಯ ನಡುವೆಯೂ ರಾಗಿ ಗಿಡಗಳು ಉತ್ತಮವಾಗಿ ಬೆಳೆದಿದ್ದರಿಂದ ಹುಲ್ಲಿನ ಪ್ರಮಾಣ ಹೆಚ್ಚಾಗಿದೆ. ಇದೀಗ



ಸಂಪೂರ್ಣವಾಗಿ ಒಣಗಿರುವ ರಾಗಿ ಹುಲ್ಲು ಖರೀದಿಗೆ ವ್ಯಾಪಾರಿಗಳು ಹಾಗೂ ಜಾನುವಾರು ಸಾಕಾಣಿಕೆದಾರರು ಮುಗಿಬೀಳುತ್ತಿದ್ದಾರೆ.

ನೆರೆಯ ಜಿಲ್ಲೆಗಳಿಂದ ಹೆಚ್ಚಿದ ಬೇಡಿಕೆ:

ಜಿಲ್ಲಾ ಕೇಂದ್ರ ದಾವಣಗೆರೆ ಸೇರಿದಂತೆ ವಿವಿಧ ಭಾಗಗಳಲ್ಲಿ ಭತ್ತದ ಹುಲ್ಲು ಹೇರಳವಾಗಿ ಲಭ್ಯವಿದ್ದರೂ, ಹಸು, ಎತ್ತು, ಎಮ್ಮೆ ಸೇರಿದಂತೆ ಜಾನುವಾರುಗಳಿಗೆ ರಾಗಿ ಹುಲ್ಲಿನ ಮೇಲಿನ ಒಲವು ಹೆಚ್ಚಾಗಿದೆ. ಹೀಗಾಗಿ ದಾವಣಗೆರೆ ಜಿಲ್ಲೆಯ ವಿವಿಧ ಗ್ರಾಮಗಳ ರೈತರು ಹಾಗೂ ಜಾನುವಾರು ಸಾಕಾಣಿಕೆದಾರರು ಜಗಳೂರು ತಾಲೂಕಿಗೆ ಆಗಮಿಸಿ ರಾಗಿ ಹುಲ್ಲು ಖರೀದಿಸುತ್ತಿದ್ದಾರೆ.

ಇದರೊಂದಿಗೆ ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು, ಚಳ್ಳಕೆರೆ ಹಾಗೂ ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ, ಕೊಟ್ಟೂರು ಭಾಗಗಳಿಂದಲೂ ರೈತರು ಜಗಳೂರಿಗೆ ಬಂದು ರಾಗಿ ಹುಲ್ಲನ್ನು ಖರೀದಿಸಿಕೊಂಡು ಹೋಗುತ್ತಿದ್ದಾರೆ. ಇದರಿಂದ ತಾಲೂಕಿನ ರಾಗಿ ಹುಲ್ಲು ಹೊರ ಜಿಲ್ಲೆಗಳ ಮಾರುಕಟ್ಟೆಯಲ್ಲಿಯೂ ತನ್ನದೇ ಆದ ಬೇಡಿಕೆ ಪಡೆದುಕೊಂಡಿದೆ.

ಒಂದು ಪಂಡೆಗೆ 250ರಿಂದ 300:

ಪ್ರಸ್ತುತ ಮಾರುಕಟ್ಟೆಯಲ್ಲಿ ಒಂದು ಪಂಡೆ ರಾಗಿ ಹುಲ್ಲಿಗೆ 250ರಿಂದ 300ರವರೆಗೆ ಬೆಲೆ ದೊರೆಯುತ್ತಿದೆ. ಒಂದು ಟ್ರ್ಯಾಕ್ಟರ್ ಲೋಡ್ ರಾಗಿ ಹುಲ್ಲು ಸುಮಾರು 12 ಸಾವಿರದಿಂದ 14 ಸಾವಿರದವರೆಗೆ ಮಾರಾಟವಾಗುತ್ತಿದೆ. ಹುಲ್ಲಿನ ಗುಣಮಟ್ಟ, ಒಣಗಿರುವ ಪ್ರಮಾಣ ಹಾಗೂ ಸಾಗಣೆ ವ್ಯವಸ್ಥೆಯ ಆಧಾರದ ಮೇಲೆ ಬೆಲೆಯಲ್ಲಿ ವ್ಯತ್ಯಾಸ ಕಂಡುಬರುತ್ತಿದೆ.

ಮಳೆಯ ಕೊರತೆಯಿಂದಾಗಿ ರಾಗಿ ಕಾಳು ಇಳುವರಿ ಕುಸಿದಿರುವ ಹಿನ್ನೆಲೆಯಲ್ಲಿ ಕಂಗಾಲಾಗಿದ್ದ ರೈತರಿಗೆ ಹುಲ್ಲಿನ ಮಾರಾಟದಿಂದ ಒಂದಷ್ಟು ಹಣ ಕೈ ಸೇರುತ್ತಿದೆ. ಬೆಳೆ ಬೆಳೆಯಲು ಮಾಡಿದ ಖರ್ಚಿನ ಸಂಪೂರ್ಣ ಮೊತ್ತವನ್ನು ಹುಲ್ಲಿನ ಮಾರಾಟದಿಂದಲೇ ಭರಿಸಲು ಸಾಧ್ಯವಾಗದಿದ್ದರೂ, ಕೃಷಿ ವೆಚ್ಚದ ಒಂದು ಭಾಗವನ್ನು ಸರಿದೂಗಿಸಿಕೊಳ್ಳಲು ನೆರವಾಗುತ್ತಿದೆ.

ಜಾನುವಾರುಗಳಿಗೆ ರಾಗಿ ಹುಲ್ಲು ಏಕೆ ಅಚ್ಚುಮೆಚ್ಚು?

ರಾಗಿ ಹುಲ್ಲು ಹಸು, ಎತ್ತು, ಎಮ್ಮೆ ಸೇರಿದಂತೆ ಮೆಲುಕು ಹಾಕುವ ಜಾನುವಾರುಗಳಿಗೆ ಪ್ರಮುಖ ಒಣ ಮೇವಿನ ಮೂಲವಾಗಿದೆ. ರಾಗಿ ಬೆಳೆಯ ಕಾಂಡ ಹಾಗೂ ಎಲೆಗಳಲ್ಲಿ ನಾರಿನ ಅಂಶವಿದ್ದು, ಜಾನುವಾರುಗಳ ಜೀರ್ಣಕ್ರಿಯೆಗೆ ಅಗತ್ಯವಾದ ಒಣ ಮೇವಿನ ಪಾತ್ರವನ್ನು ನಿರ್ವಹಿಸುತ್ತದೆ. ರಾಗಿ ಹುಲ್ಲನ್ನು ಸರಿಯಾಗಿ ಒಣಗಿಸಿ ಸಂಗ್ರಹಿಸಿದರೆ ದೀರ್ಘಕಾಲದವರೆಗೆ ಬಳಸಬಹುದು. ಹೀಗಾಗಿ ಮಳೆಗಾಲದ ನಂತರ ಹಾಗೂ ಬೇಸಿಗೆಯ ಸಂದರ್ಭದಲ್ಲಿ ಒಣ ಮೇವಿನ ಕೊರತೆ ಎದುರಾಗದಂತೆ ರೈತರು ಮುನ್ನೆಚ್ಚರಿಕೆಯಾಗಿ ರಾಗಿ ಹುಲ್ಲನ್ನು ಸಂಗ್ರಹಿಸಿಟ್ಟುಕೊಳ್ಳುತ್ತಾರೆ.



ವಿಶೇಷವಾಗಿ ರಾಗಿ ಹುಲ್ಲಿನಲ್ಲಿ ಉಳಿದಿರುವ ಎಲೆಗಳ ಭಾಗ ಹಾಗೂ ಮೃದುವಾದ ಕಾಂಡದ ಭಾಗವನ್ನು ಜಾನುವಾರುಗಳು ಇಷ್ಟಪಟ್ಟು ತಿನ್ನುತ್ತವೆ. ಚೆನ್ನಾಗಿ ಒಣಗಿದ ಹುಲ್ಲನ್ನು ಸುಲಭವಾಗಿ ಸಂಗ್ರಹಿಸಿ, ಅಗತ್ಯವಿದ್ದಾಗ ಸಣ್ಣ ತುಂಡುಗಳಾಗಿ ಕತ್ತರಿಸಿ ಮೇವು ನೀಡಬಹುದು. ಈ ಕಾರಣದಿಂದಲೂ ರಾಗಿ ಹುಲ್ಲಿಗೆ ರೈತರು ಹೆಚ್ಚಿನ ಆದ್ಯತೆ ನೀಡುತ್ತಾರೆ.

ರಾಗಿ ಹುಲ್ಲಿನಲ್ಲಿರುವ ಪೌಷ್ಟಿಕಾಂಶಗಳು

ರಾಗಿ ಹುಲ್ಲಿನಲ್ಲಿ ಮುಖ್ಯವಾಗಿ ನಾರಿನ ಅಂಶ, ಒಣ ಪದಾರ್ಥ ಹಾಗೂ ಅಲ್ಪ ಪ್ರಮಾಣದ ಪ್ರೋಟೀನ್ ಮತ್ತು ಖನಿಜಾಂಶಗಳಿರುತ್ತವೆ. ಸಾಮಾನ್ಯವಾಗಿ ರಾಗಿ ಹುಲ್ಲಿನಲ್ಲಿ ಕಚ್ಚಾ ಪ್ರೋಟೀನ್ ಪ್ರಮಾಣ ಶೇ.5ರಷ್ಟು ಇರುತ್ತಾದೆ ರಾಸುಗಳು ಸಹ ಹೆಚ್ಚು ಇಷ್ಟ ಪಡುತ್ತಾವೆ

ರೈತರಿಗೆ ಹುಲ್ಲೇ ಒಂದಷ್ಟು ಆಸರೆ:

ಒಟ್ಟಾರೆ, ಮುಂಗಾರು ಮಳೆಯ ವೈಫಲ್ಯದಿಂದ ರಾಗಿ ಕಾಳಿನ ಇಳುವರಿ ಕುಸಿದಿದ್ದರೂ, ಹುಲ್ಲಿನ ಸಮೃದ್ಧ ಉತ್ಪಾದನೆ ರೈತರಿಗೆ ಸಮಾಧಾನ ತಂದಿದೆ. ಅದರಲ್ಲೂ ನೆರೆಯ ಜಿಲ್ಲೆಗಳಿಂದ ಬೇಡಿ–ಕೆ ಹೆಚ್ಚಾಗಿರುವುದರಿಂದ ಜಗಳೂರು ತಾಲೂಕಿನ ರಾಗಿ ಹುಲ್ಲು ಉತ್ತಮ ಮಾರುಕಟ್ಟೆ ಕಂಡುಕೊಂಡಿದೆ. ಬೆಳೆ ಕೈ–ಕೊಟ್ಟರೂ ಹುಲ್ಲು ಕೈಹಿಡಿದಿದೆ ಎಂಬ ಮಾತು ಪ್ರಸಕ್ತ ಸಾಲಿನ ರಾಗಿ ಬೆಳೆಗಾರರ ಪರಿಸ್ಥಿತಿಗೆ ಸಾಕ್ಷಿಯಾಗಿದೆ.

ನ.7ರಂದು ಬಿಳಿಚೋಡಿನಲ್ಲಿ ಪ್ರಜಾಸೇವಾ ಆಂದೋಲನ: ತಹಶೀಲ್ದಾರ್ ಗುರು ಬಸವರಾಜ್

“ಮುಂಜಾನೆಯ ಮೆರಗು”

ಜಗಳೂರು ನ, 05– ತಾಲೂಕಿನ ಬಿಳಿಚೋಡು ಗ್ರಾಮದಲ್ಲಿ ನವೆಂಬರ್ 7ರಂದು ಶಾಸಕ ಬಿ. ದೇವೇಂದ್ರಪ್ಪ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಪ್ರಜಾಸೇವಾ ಆಂದೋಲನ ಕಾರ್ಯಕ್ರಮದ ಅಂಗವಾಗಿ ಗುರುವಾರ ತಹಶೀಲ್ದಾರ್ ಗುರುಬಸವರಾಜ್ ಅವರು ಸ್ಥಳಕ್ಕೆ ಭೇಟಿ ನೀಡಿ ಪೂರ್ವಸಿದ್ಧತಾ ಕಾರ್ಯಗಳನ್ನು ಪರಿಶೀಲಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಾರ್ವಜನಿಕರ ಕುಂದುಕೊರತೆಗಳಿಗೆ ಪರಿಹಾರ ಕಲ್ಪಿಸುವುದು ಹಾಗೂ ಸರ್ಕಾರದ ವಿವಿಧ ಇಲಾಖೆಗಳ ಸೇವೆಗಳನ್ನು ಜನರಿಗೆ ಒಂದೇ ವೇದಿಕೆಯಲ್ಲಿ ತಲುಪಿಸುವ ಉದ್ದೇಶದಿಂದ ಪ್ರಜಾಸೇವಾ ಆಂದೋಲನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಆದ್ದ–ರಿಂದ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಸಮನ್ವಯದಿಂದ ಕಾರ್ಯನಿರ್ವಹಿಸಿ, ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಸೂಚಿಸಿದರು.

ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿ, ವಿವಿಧ ಇಲಾಖೆಗಳ ಮೂಲಕ ದೊರೆಯುವ ಸರ್ಕಾರಿ ಸೌಲಭ್ಯಗಳು ಹಾಗೂ ಸೇವೆಗಳನ್ನು ಸದ್ವಿನಿಯೋಗಪಡಿಸಿಕೊಳ್ಳಬೇಕು. ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಈ ಅವಕಾಶವನ್ನು ಬಳಸಿಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಂಬಂಧಪಟ್ಟ ಇಲಾಖೆಗಳ ಸಿಬ್ಬಂದಿ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

ಸೊಳ್ಳೆಗಳ ನಿಯಂತ್ರಣಕ್ಕೆ ಪಟ್ಟಣ ಪಂಚಾಯಿತಿಯಿಂದ ಫಾಗಿಂಗ್ ಕಾರ್ಯಾಚರಣೆ

ಸಾರ್ವಜನಿಕರು ಸ್ವಚ್ಛತೆಗೆ ಆದ್ಯತೆ ನೀಡಿ: ಮುಖ್ಯಾಧಿಕಾರಿ ಸಿ. ಲೋಕ್ಯಾನಾಯ್ಕ

“ಮುಂಜಾನೆಯ ಮೆರಗು”

ಜಗಳೂರು, ನ, 05– ಪಟ್ಟಣದಲ್ಲಿ ಸೊಳ್ಳೆಗಳ ಹಾವಳಿ ನಿಯಂತ್ರಿಸುವ ಉದ್ದೇಶದಿಂದ ಪಟ್ಟಣ ಪಂಚಾಯಿತಿ ವತಿಯಿಂದ ವಿವಿಧ ಬಡಾವಣೆಗಳಲ್ಲಿ ಫಾಗಿಂಗ್ ಕಾರ್ಯಾಚರಣೆ ಕೈಗೊಳ್ಳಲಾಯಿತು.

ಗುರುವಾರ ಪಟ್ಟಣದ ವಿವಿಧ ಬಡಾವಣೆಗಳಲ್ಲಿ ನಡೆಯುತ್ತಿದ್ದ ಫಾಗಿಂಗ್ ಕಾರ್ಯವನ್ನು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿ. ಲೋಕ್ಯಾನಾಯ್ಕ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪಟ್ಟಣದ ಪ್ರತಿಯೊಬ್ಬ ನಾಗರಿಕರು ಸ್ವಚ್ಛತೆಗೆ ಆದ್ಯತೆ ನೀಡಬೇಕು. ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದರಿಂದ ಸೊಳ್ಳೆಗಳ ಉತ್ಪತ್ತಿಯನ್ನು ನಿಯಂತ್ರಿಸಲು ಸಾಧ್ಯವಾಗುತ್ತದೆ. ಪಟ್ಟಣ ಪಂಚಾಯಿತಿ ವತಿಯಿಂದ ಕೈಗೊಳ್ಳಬೇಕಾದ



ಸ್ವಚ್ಛತಾ ಹಾಗೂ ಸೊಳ್ಳೆ ನಿಯಂತ್ರಣ ಕಾರ್ಯಗಳನ್ನು ನಿರಂತರವಾಗಿ ಮಾಡಲಾಗುತ್ತಿದೆ. ಸಾರ್ವಜನಿಕರೂ ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಫಾಗಿಂಗ್ ಮಾಡುವುದರಿಂದ ಸೊಳ್ಳೆಗಳ ಹಾವಳಿಯನ್ನು ತಾತ್ಕಾಲಿಕವಾಗಿ ಕಡಿಮೆ ಮಾಡಬಹುದು. ಆದ–ರೆ ಇದೊಂದೇ ಶಾಶ್ವತ ಪರಿಹಾರವಲ್ಲ. ಮನೆಗಳ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳುವುದು, ತ್ಯಾಜ್ಯ ವಸ್ತುಗಳನ್ನು ಎಲ್ಲೆಂದರಲ್ಲಿ ಬಿಸಾಡದೆ ಸ್ವಚ್ಛತೆ ಕಾಪಾಡುವುದು ಹಾಗೂ ನೀರಿನ ಸಂಗ್ರಹ ತೊಟ್ಟಿಗಳನ್ನು ಮುಚ್ಚಿಡುವ ಮೂಲಕ ಸೊಳ್ಳೆಗಳ ಉತ್ಪತ್ತಿಯನ್ನು ತಡೆಗಟ್ಟಲು ಸಾರ್ವಜನಿಕರು ಮುಂದಾಗಬೇಕು ಎಂದು ತಿಳಿಸಿದರು.

ರೈತ ಸಂಘದ ವಸತಿಮನೆ ಬಳಗದ ತಾಲೂಕು ಅಧ್ಯಕ್ಷ ಕುಮಾರ್ ಮಾತನಾಡಿ, ಪಟ್ಟಣದಲ್ಲಿ ಸೊಳ್ಳೆಗಳ ಹಾವಳಿ ವಿಪರೀತವಾಗಿದ್ದು, ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಪಟ್ಟಣ ಪಂಚಾಯಿತಿ ವತಿಯಿಂದ ಫಾಗಿಂಗ್ ಕಾರ್ಯಾಚರಣೆ ಕೈಗೊಂಡಿರುವುದು ಸಂತಸದ ವಿಚಾರವಾಗಿದೆ. ಇಂತಹ ಕಾರ್ಯಾಚರಣೆಗಳನ್ನು ನಿಯಮಿತವಾಗಿ ಮುಂದುವರಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಆರೋಗ್ಯ ನಿರೀಕ್ಷಕ ಭರ್ಮಪ್ಪ, ಸಿಬ್ಬಂದಿಗಳಾದ ಪರಶುರಾಮಪ್ಪ, ರಾಜು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಟ್ರಿಪಲ್ ಜಂಪ್‌ನಲ್ಲಿ ರಾಜ್ಯಕ್ಕೆ ಪ್ರಥಮ ರಾಷ್ಟ್ರಮಟ್ಟಕ್ಕೆ ಮಾನ್ಯ ಎಸ್. ಆಯ್ಕೆ

“ಮುಂಜಾನೆಯ ಮೆರಗು”


ಜಗಳೂರು ನ, 05– ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನಡೆದ 17 ವರ್ಷದೊಳಗಿನ ಬಾಲಕ ಮತ್ತು ಬಾಲಕಿಯರ ರಾಜ್ಯಮಟ್ಟದ ಅಥ್ಲೆಟಿ–ಕ್ಸ್ ಕ್ರೀಡಾಕೂಟದಲ್ಲಿ ಜಗಳೂರು ತಾಲೂಕಿನ ಕಣ್ವಕುಪ್ಪೆ ಗ್ರಾಮದ ಮಾನ್ಯ ಎಸ್. ಅವರು ಟ್ರಿಪಲ್ ಜಂಪ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಷ್ಟ್ರಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.



ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಕ್ರೀಡಾಪಟುಗಳು ಭಾಗವಹಿಸಿದ್ದ ಸ್ಪರ್ಧೆಯಲ್ಲಿ ಮಾನ್ಯ ಅವರು ಅತ್ಯುತ್ತಮ ಪ್ರದರ್ಶನ ನೀಡುವ ಮೂಲಕ ಪ್ರಥಮ ಸ್ಥಾನ ಗಳಿಸಿ ತಾಲೂಕಿಗೆ ಕೀರ್ತಿ ತಂದಿದ್ದಾರೆ. ಈ ವಿದ್ಯಾರ್ಥಿಯು ಉಡುಪಿಯ ಬಾಲಕೀಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರೌಢ ಶಾಲಾ ವಿಭಾಗದಲ್ಲಿ 8ನೇ ತರಗತಿ ವಿದ್ಯಾಭ್ಯಾಸ ಮಾಡುತ್ತಿದ್ದಾಳೆ.

ಇವರು ಜಗಳೂರು ತಾಲೂಕಿನ ಕಣ್ವಕುಪ್ಪೆ ಗ್ರಾಮದ ಸಣ್ಣ ಓಬಯ್ಯ ಮತ್ತು ಗೀತಾ ದಂಪತಿಯ ಪುತ್ರಿಯಾಗಿದ್ದು, ಗ್ರಾಮೀಣ ಪ್ರದೇಶದಲ್ಲಿ ಬೆಳೆದು ಕ್ರೀಡಾ ಕ್ಷೇತ್ರದಲ್ಲಿ ರಾಜ್ಯಮಟ್ಟದ ಸಾಧನೆ ಮಾಡಿರುವುದು ಗ್ರಾಮಸ್ಥರು ಹಾಗೂ ತಾಲೂಕಿನ ಕ್ರೀಡಾಭಿಮಾನಿಗಳಲ್ಲಿ ಸಂತಸ ಮೂಡಿಸಿದೆ.

ಮಾನ್ಯ ಎಸ್ ಅವರ ಸಾಧನೆಗೆ ಪೋಷಕರು, ಗ್ರಾಮಸ್ಥರು ಹಾಗೂ ಕ್ರೀಡಾಭಿಮಾನಿಗಳು ಅಭಿನಂದನೆ ಸಲ್ಲಿಸಿದ್ದು, ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿಯೂ ಉತ್ತಮ ಪ್ರದರ್ಶನ ನೀಡಿ ಯಶಸ್ಸು ಸಾಧಿಸಲಿ ಎಂದು ಹಾರೈಸಿದ್ದಾರೆ.



ರಾತ್ರಿ ವೇಳೆ ವಾಹನಗಳನ್ನು ಅಡ್ಡಗಟ್ಟಿ ಸವಾರರ ಮೇಲೆ ಹಲ್ಲೆ

ಒಂದು ವಾರದಿಂದ ಪೊಲೀಸರಿಗೆ ಸಿಗದ ಸುಳಿವು

“ಮುಂಜಾನೆಯ ಮೆರಗು”

ಜಗಳೂರು ನ, 05– ತಾಲೂಕಿನ ಅಣಬೂರು ಹಾಗೂ ಸುತ್ತಮುತ್ತಲಿನ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ಕಳೆದ ಒಂದು ವಾರದಿಂದ ಅಪರಿಚಿತ ವ್ಯಕ್ತಿಗಳು ವಾಹನ ಸವಾರರನ್ನು ಅಡ್ಡಗಟ್ಟಿ ಹಲ್ಲೆ ನಡೆಸುತ್ತಿರುವ ಘಟನೆಗಳು ನಡೆಯುತ್ತಿದ್ದು, ಈ ಭಾಗದ ಗ್ರಾಮಸ್ಥರು ಹಾಗೂ ವಾಹನ ಸವಾರರಲ್ಲಿ ಆತಂಕ ಮನೆಮಾಡಿದೆ.

ತಾಲೂಕಿನ ಅಣಬೂರು ಗ್ರಾಮಕ್ಕೆ ತೆರಳುವ ಮಾರ್ಗ ಮಧ್ಯದಲ್ಲಿರುವ ಆಂಜನೇಯ ಸ್ವಾಮಿ ದೇವಸ್ಥಾನದ ಸಮೀಪ ರಾತ್ರಿ ವೇಳೆ ಅಪರಿಚಿತ ವ್ಯಕ್ತಿಗಳು ದ್ವಿಚಕ್ರ ವಾಹನ ಹಾಗೂ ಕಾರುಗಳನ್ನು ಅಡ್ಡಗಟ್ಟಿ ಸವಾರರ ಮೇಲೆ ಹಲ್ಲೆ ನಡೆಸುತ್ತಿದ್ದಾರೆ ಎನ್ನಲಾಗಿದೆ. ರಾತ್ರಿ ಸಮಯದಲ್ಲಿ ಇವರ ಉಪಟಳ ಹೆಚ್ಚಾಗುತ್ತಿದ್ದು, ಈ ಮಾರ್ಗದಲ್ಲಿ ಸಂಚರಿಸಲು ಸಾರ್ವಜನಿಕರು ಭಯಪಡುವಂತಾಗಿದೆ.

ಜಗಳೂರಿನಲ್ಲಿ ತಮ್ಮ ಕೆಲಸ ಕಾರ್ಯಗಳನ್ನು ಮುಗಿಸಿಕೊಂಡು ಅಣಬೂರು, ಅಣಬೂರು ಗೊಲ್ಲರಹಟ್ಟಿ, ಜ್ಯೋತಿಪುರ, ಬ್ಯಾಟಗಾರನಹಳ್ಳಿ, ಗಾಂಧಿನಗರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಗೆ ತೆರಳುವವರು ಇದೇ ಮಾರ್ಗವನ್ನು ಅವಲಂಬಿಸಿದ್ದಾರೆ. ಅಲ್ಲದೆ, ಈ ರಸ್ತೆ ಬಳ್ಳಾರಿ ಜಿಲ್ಲೆಗೂ ಸಂಪರ್ಕ ಕಲ್ಪಿಸುವ ಪ್ರಮುಖ ಮಾರ್ಗವಾಗಿರುವುದರಿಂದ ಕೂಡ್ಲಿಗಿ ಭಾಗದಿಂದ ವ್ಯಾಪಾರ ವಹಿವಾಟು ನಡೆಸಲು ಜಗಳೂರಿಗೆ ಬರುವ ವಾಹನ ಸವಾರರೂ ಇದೇ ರಸ್ತೆಯಲ್ಲಿ ಸಂಚರಿಸಬೇಕಾಗಿದೆ.

ಆದರೆ, ರಾತ್ರಿ ವೇಳೆ ಸಂಚರಿಸುವ ವಾಹನಗಳನ್ನು ಗುರಿಯಾಗಿಸಿಕೊಂಡು ಅಪರಿಚಿತರು ಹಲ್ಲೆ ನಡೆಸುತ್ತಿರುವುದರಿಂದ ಸಾರ್ವಜನಿಕರು ಜೀವಭಯದಲ್ಲೇ ಪ್ರಯಾಣಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಸಂಬಂಧ ಅಣಬೂರು ಗೊಲ್ಲರಹಟ್ಟಿ ಗ್ರಾಮದ ಮುರುಳಿ ಎಂಬುವವರು ಜಗಳೂರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.



ಹಲ್ಲೆಯಿಂದ ಕೂದಲೆಳೆಯ ಅಂತರದಲ್ಲಿ ಪಾರು:

ಕೂಡ್ಲಿಗಿ ಭಾಗದಿಂದ ವ್ಯಾಪಾರ ವಹಿವಾಟು ಮುಗಿಸಿಕೊಂಡು ಜಗಳೂರಿಗೆ ಬರುತ್ತಿದ್ದ ವೇಳೆ ಅಣಬೂರು ಸಮೀಪ ರಾತ್ರಿ ಅಪರಿಚಿತರು ಅಡ್ಡಗಟ್ಟಿ ಹಲ್ಲೆ ನಡೆಸಿದರು. ಅವರಿಂದ ಹೇಗೋ ತಪ್ಪಿಸಿಕೊಂಡು ಬಂದಿದ್ದೇನೆ ಎಂದು ಹಲ್ಲೆಗೊಳಗಾದ ಮಹಾಂತೇಶ್ ಆತಂಕ ವ್ಯಕ್ತಪಡಿಸಿದ್ದಾರೆ.

ಪೊಲೀಸರಿಂದ ಶೋಧ ಕಾರ್ಯ:

ಕಳೆದ ಒಂದು ವಾರದಿಂದ ಪೊಲೀಸರು ರಾತ್ರಿ ವೇಳೆ ಗಸ್ತು ತಿರುಗಿ ಅಪರಿಚಿತ ವ್ಯಕ್ತಿಗಳ ಪತ್ತೆಗೆ ಕಾರ್ಯಚ

ಚಿರತೆ ದಾಳಿಗೆ ಚಂದ್ರಪ್ಪ ಬಲಿ: ಕುಟುಂಬಕ್ಕೆ ಸಾಂತ್ವನ ಹೇಳಿದ ಸಚಿವ ಟಿ.ರಘುಮೂರ್ತಿ

ಚಿರತೆ ಸೆರೆಗೆ ತಕ್ಷಣ ಕಾರ್ಯಾಚರಣೆ ನಡೆಸಲು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ

"ಮುಂಜಾನೆಯ ಮೆರಗು"

ಚಳ್ಳಕೆರೆ ನ, 05– ತಾಲ್ಲೂಕಿನ ದೊಡ್ಡಚೆಲ್ಲೂರು ಗ್ರಾಮದಲ್ಲಿ ಚಿರತೆ ದಾಳಿಗೆ ಸಿಲುಕಿ ಚಂದ್ರಪ್ಪ ಮೃತಪಟ್ಟಿರುವ ಘಟನೆಗೆ ಸಚಿವ ಟಿ.ರಘುಮೂರ್ತಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದು, ಮೃತರ ಕುಟುಂಬಕ್ಕೆ ಸರ್ಕಾರದಿಂದ ಅಗತ್ಯ ನೆರವು ಹಾಗೂ ಪರಿಹಾರ ಒದಗಿಸುವ ಭರವಸೆ ನೀಡಿದ್ದಾರೆ.

ಘಟನೆ ತಿಳಿದ ಕೂಡಲೇ ಸ್ಥಳೀಯ ಆಸ್ಪತ್ರೆಗೆ ಭೇಟಿ ನೀಡಿದ ಸಚಿವರು, ಶವಾಗಾರದಲ್ಲಿ ಮೃತ ಚಂದ್ರಪ್ಪ ಅವರ ಅಂತಿಮ ದರ್ಶನ ಪಡೆದು ಗೌರವ ಸಲ್ಲಿಸಿದರು. ಬಳಿಕ ಮೃತರ ನಿವಾಸಕ್ಕೆ ತೆರಳಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿ, ದುಃಖದ ಸಂದರ್ಭದಲ್ಲಿ ಸರ್ಕಾರ ಅವರ



ನೆರವಿಗೆ ನಿಲ್ಲಲಿದೆ ಎಂದು ಧೈರ್ಯ ತುಂಬಿದರು.

ನಂತರ ಅರಣ್ಯ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದ ಸಚಿವರು, ಚಿರತೆ ದಾಳಿಯಿಂದ ಗ್ರಾಮದಲ್ಲಿ ಭಯದ ವಾತಾವರಣ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಸೂಚಿಸಿದರು. ಚಿರತೆಯನ್ನು ಶೀಘ್ರವಾಗಿ ಪತ್ತೆಹಚ್ಚಿ ಸೆರೆಹಿಡಿಯಲು ತಕ್ಷಣ ಕಾರ್ಯಾಚರಣೆ ಆರಂಭಿಸಬೇಕು ಎಂದು ನಿರ್ದೇಶನ ನೀಡಿದರು.

ಮೃತರ ಕುಟುಂಬಕ್ಕೆ ಸರ್ಕಾರದಿಂದ ದೊರೆಯಬೇಕಾದ ಪರಿಹಾರವನ್ನು ವಿಳಂಬವಿಲ್ಲದೆ ಬಿಡುಗಡೆ ಮಾಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಇಂತಹ ಘಟನೆಗಳು ಮರುಕಳಿಸದಂತೆ ಅರಣ್ಯ ಇಲಾಖೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು. ಗ್ರಾಮಸ್ಥರ ಜೀವ ಮತ್ತು ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಸಚಿವ ಟಿ.ರಘುಮೂರ್ತಿ ತಿಳಿಸಿದರು.

ಸಮುದಾಯಗಳಿಗೆ ಸಾಮಾಜಿಕ ನ್ಯಾಯ ಕಲ್ಪಿಸಲು ಸಮೀಕ್ಷೆ ವರದಿ ಮಹತ್ವದ್ದು: ಡಾ.ಯತೀಂದ್ರ ಸಿದ್ದರಾಮಯ್ಯ



"ಮುಂಜಾನೆಯ ಮೆರಗು"

ಬೆಂಗಳೂರು ನ, 05– ಹಿಂದುಳಿದ ಜಾತಿಗಳ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸಮೀಕ್ಷೆಯ ವರದಿಯನ್ನು ಶೀಘ್ರ ಬಿಡುಗಡೆಗೊಳಿಸುವಂತೆ ರಾಜ್ಯ ಸರ್ಕಾರದ ಮೇಲೆ ಒತ್ತಡ ತರಬೇಕೆಂದು ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ಪದಾಧಿಕಾರಿಗಳು ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು.

ಬೆಂಗಳೂರಿನ ಗೃಹ ಕಚೇರಿಯಲ್ಲಿ ಸಚಿವರನ್ನು ಭೇಟಿಯಾದ ಒಕ್ಕೂಟದ ಪದಾಧಿಕಾರಿಗಳು, ಜಾತಿ ಸಮೀಕ್ಷೆಯ ವರದಿ ಬಿಡುಗಡೆ ವಿಳಂಬವಾಗುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರದ ಗಮನ ಸೆಳೆಯುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಹಿಂದುಳಿದ ಸಮುದಾಯಗಳ ಸಾಮಾಜಿಕ ನ್ಯಾಯ, ಶೈಕ್ಷಣಿಕ ಪ್ರಗತಿ ಹಾಗೂ ಆರ್ಥಿಕ ಸಬಲೀಕರಣಕ್ಕೆ ಜಾತಿ ಸಮೀಕ್ಷೆಯ ವರದಿ ಮಹತ್ವದ ಪಾತ್ರ ವಹಿಸಲಿದೆ ಎಂಬ ಕುರಿತು ಚರ್ಚಿಸಲಾಯಿತು.

ಸಮೀಕ್ಷೆಯಲ್ಲಿ ಸಂಗ್ರಹಿಸಿರುವ ಅಂಕಿಅಂಶಗಳು ಹಾಗೂ ಶಿಫಾರಸುಗಳ ಆಧಾರದ ಮೇಲೆ ಹಿಂದುಳಿದ ಸಮುದಾಯಗಳಿಗೆ ನ್ಯಾಯಯುತ ಪ್ರಾತಿನಿಧ್ಯ ಕಲ್ಪಿಸುವುದು, ಅರ್ಹ ಫಲಾನುಭವಿಗಳಿಗೆ ಮೀಸಲಾತಿ ಸೌಲಭ್ಯ ತಲುಪಿಸುವುದು ಹಾಗೂ ಸಮುದಾಯಗಳ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾದ ಯೋಜನೆಗಳನ್ನು ರೂಪಿಸುವುದು ಅಗತ್ಯವಾಗಿದೆ ಎಂದು ಪದಾಧಿಕಾರಿಗಳು ಅಭಿಪ್ರಾಯಪಟ್ಟರು.

ಇದಕ್ಕೆ ಸ್ಪಂದಿಸಿದ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಅವರು, ಸಾಮಾಜಿಕ ನ್ಯಾಯ ಮತ್ತು ಸಮಾನ ಅವಕಾಶಗಳ ಆಶಯ ಸಾಕಾರಗೊಳಿಸುವಲ್ಲಿ ಜಾತಿ ಸಮೀಕ್ಷೆಯ ವರದಿಯ ಮಹತ್ವವನ್ನು ಸರ್ಕಾರದ ಗಮನಕ್ಕೆ ತರುವುದಾಗಿ ತಿಳಿಸಿದರು.

26 ಪಂಗಡಗಳ ಫಲಾನುಭವಿಗಳಿಗೆ ಯೋಜನೆಗಳ ಸೌಲಭ್ಯ ಸುಲಭವಾಗಿ ತಲುಪಿಸಲು ಡಿಜಿಟಲ್ ವೇದಿಕೆ: ಸಚಿವ ಯು.ಟಿ.ಖಾದರ್

"ಮುಂಜಾನೆಯ ಮೆರಗು"

ಬೆಂಗಳೂರು ನ, 05– ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಶ್ರೀ ನಾರಾಯಣ ಗುರು ಅಭಿವೃದ್ಧಿ ನಿಗಮದ ನೂತನ ವೆಬ್‌ಸೈಟ್ ಹಾಗೂ 'ವಿಶ್ವಾಸ' ಆ್ಯಪ್ ಅನ್ನು ಬೆಂಗಳೂರಿನಲ್ಲಿ ಸಚಿವ ಯು.ಟಿ.ಖಾದರ್ ಅವರು ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರೊಂದಿಗೆ ಲೋಕಾರ್ಪಣೆಗೊಳಿಸಿದರು.

ರಾಜ್ಯದ 26 ಪಂಗಡಗಳಿಗೆ ಸೇರಿದ ಅರ್ಹ ಫಲಾನುಭವಿಗಳಿಗೆ ಸರ್ಕಾರದ ವಿವಿಧ ಸಾಮಾಜಿಕ ಮತ್ತು ಶೈಕ್ಷಣಿಕ ಯೋಜನೆಗಳ ಮಾಹಿತಿ ಹಾಗೂ ಸೌಲಭ್ಯಗಳನ್ನು ಸುಲಭವಾಗಿ ತಲುಪಿಸುವ ಉದ್ದೇಶದಿಂದ ಈ ಡಿಜಿಟಲ್ ವೇದಿಕೆಗಳನ್ನು ಅಭಿವೃದ್ಧಿಪಡಿಸಲಾಗಿದೆ.

'ವಿಶ್ವಾಸ' ಆ್ಯಪ್ ಮೂಲಕ ವಿವಿಧ ಯೋಜನೆಗಳಿಗೆ ಅರ್ಜಿ ಸಲ್ಲಿಸುವ ಪ್ರಕ್ರಿಯೆಯನ್ನು ಸರಳಗೊಳಿಸಲಾಗಿದ್ದು, ರೈತರು, ವಿದ್ಯಾರ್ಥಿಗಳು ಸೇರಿದಂತೆ ಅರ್ಹ ಫಲಾನುಭವಿಗಳು ರಾಜ್ಯದ ಯಾವುದೇ ಭಾಗದಿಂದ, ಗ್ರಾಮೀಣ ಪ್ರದೇಶಗಳಲ್ಲಿದ್ದರೂ ಯೋಜನೆಗಳ ಮಾಹಿತಿ ಪಡೆದು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಈ ಡಿಜಿಟಲ್ ವ್ಯವಸ್ಥೆಯಿಂದ ಫಲಾನುಭವಿಗಳಿಗೆ ಕಚೇರಿಗಳಿಗೆ ಅಲೆದಾಡುವ ತೊಂದರೆ ಕಡಿಮೆಯಾಗುವುದರ ಜೊತೆಗೆ ಯೋಜನೆಗಳ ಅನುಷ್ಠಾನದಲ್ಲಿ ಪಾರದರ್ಶಕತೆ, ದಕ್ಷತೆ ಹಾಗೂ ವೇಗ ಹೆಚ್ಚಲಿದೆ. ಸರ್ಕಾರದ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ನೇರವಾಗಿ ತಲುಪಲು



ಈ ವ್ಯವಸ್ಥೆ ಸಹಕಾರಿಯಾಗಲಿದೆ.

ಕಾರ್ಯಕ್ರಮದಲ್ಲಿ ನಾರಾಯಣ ಗುರು ಅಭಿವೃದ್ಧಿ ನಿಗಮದ ಅಧ್ಯಕ್ಷ ಮಂಜುನಾಥ ಪೂಜಾರಿ, ಶಾಸಕ ಬಸವರಾಜ ತುರ್ವಿಹಾಳ್, ಉಪ್ಪಾರ ಅಭಿವೃದ್ಧಿ ನಿಗಮದ ಅಧ್ಯಕ್ಷ ಭರಮಣ್ಣ ಲಕ್ಷ್ಮಣ ಉಪ್ಪಾರ, ಕಾಂಗ್ರೆಸ್ ನಾಯಕ ರವಿ ಬೋಸರಾಜು ಸೇರಿದಂತೆ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ವಿಧಾನಸೌಧದಲ್ಲಿ ಕನ್ನಡ ನಾಮಫಲಕಗಳ ಅನಾವರಣ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಚಾಲನೆ

"ಮುಂಜಾನೆಯ ಮೆರಗು"

ಬೆಂಗಳೂರು ನ, 05– ವಿಧಾನಸೌಧದ ಆಡಳಿತಾತ್ಮಕ ವಲಯದಲ್ಲಿ ಕನ್ನಡ ಭಾಷೆಯ ಬಳಕೆಗೆ ಮತ್ತಷ್ಟು ಪ್ರೋತ್ಸಾಹ ನೀಡುವ ಉದ್ದೇಶದಿಂದ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಅಳವಡಿಸಲಾಗಿರುವ ಕನ್ನಡ ನಾಮಫಲಕಗಳನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಅನಾವರಣಗೊಳಿಸಿದರು.



ಇಂದು ವಿಧಾನಸೌಧದ ಸಚಿವ ಸಂಪುಟ ಸಭೆಯ ಕೊಠಡಿಯ ಕಾರಿಡಾರ್‌ನಲ್ಲಿ ನಾಮಫಲಕಗಳನ್ನು ಅನಾವರಣಗೊಳಿಸುವ ಮೂಲಕ ಕನ್ನಡ ಭಾಷೆಯ ಗೌರವ ಮತ್ತು ಆಡಳಿತದಲ್ಲಿ ಕನ್ನಡದ ಬಳಕೆಗೆ ಮಹತ್ವ ನೀಡುವ ಸಂದೇಶ ಸಾರಿದರು.

ಸರ್ಕಾರಿ ಕಚೇರಿಗಳು ಹಾಗೂ ಆಡಳಿತ ವ್ಯವಸ್ಥೆಯಲ್ಲಿ ಕನ್ನಡ ಭಾಷೆಯ ಬಳಕೆ ಹೆಚ್ಚಿಸುವುದು, ಕನ್ನಡಿಗರಿಗೆ ಆಡಳಿತಾತ್ಮಕ ಮಾಹಿತಿ ಸುಲಭವಾಗಿ ಲಭ್ಯವಾಗುವಂತೆ ಮಾಡುವುದು ಮತ್ತು ಕನ್ನಡ ಭಾಷೆಯ ಸ್ಥಾನಮಾನವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಈ ಕ್ರಮ ಕೈಗೊಂಡಿದೆ.

ಈ ಸಂದರ್ಭದಲ್ಲಿ ಸಚಿವರಾದ ಸತೀಶ್ ಜಾರಕಿಹೊಳಿ, ರಿಜ್ವಾನ್ ಅರ್ಷದ್, ಹೆಚ್.ಸಿ. ಬಾಲಕೃಷ್ಣ, ಟಿ. ರಘುಮೂರ್ತಿ, ಶಾಸಕ ರಾಘವೇಂದ್ರ ಹಿಟ್ನಾಳ್ ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ರೈತರ ಸಮಸ್ಯೆಗಳಿಗೆ ಶೀಘ್ರ ಸ್ಪಂದಿಸಿ ಕೆರೆಗಳಿಗೆ ನೀರು ಹರಿಸಲು ಕ್ರಮ: ಸಚಿವ ಟಿ.ರಘುಮೂರ್ತಿ

ಪರಶುರಾಂಪುರದಲ್ಲಿ ರೈತರ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ ಅಹವಾಲು ಆಲಿಸಿದ ಸಚಿವರು

"ಮುಂಜಾನೆಯ ಮೆರಗು"

ಚಳ್ಳಕೆರೆ ನ, 05– ರೈತರ ಕೃಷಿ ಚಟುವಟಿಕೆಗಳಿಗೆ ತೊಂದರೆಯಾಗದಂತೆ ನೀರಾವರಿ ಸಮಸ್ಯೆಗಳನ್ನು ಆದ್ಯತೆ ಮೇರೆಗೆ ಪರಿಹರಿಸಿ, ಅನ್ನದಾತರ ಹಿತಾಸಕ್ತಿ ಕಾಪಾಡಲು ಸರ್ಕಾರ ಬದ್ಧವಾಗಿದೆ ಎಂದು ಸಚಿವ ಟಿ.ರಘುಮೂರ್ತಿ ತಿಳಿಸಿದರು.

ಚಳ್ಳಕೆರೆ ತಾಲ್ಲೂಕಿನ ಪರಶುರಾಂಪುರದಲ್ಲಿ ನಾಲೆಗೆ ನೀರು ಹರಿಸುವಂತೆ ಆಗ್ರಹಿಸಿ ಅಖಂಡ ರೈತ ಸಂಘದ ವತಿಯಿಂದ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸುತ್ತಿದ್ದ ಸ್ಥಳಕ್ಕೆ ಭೇಟಿ ನೀಡಿ ರೈತರೊಂದಿಗೆ ಮಾತುಕತೆ ನಡೆಸಿದರು.

ಈ ಸಂದರ್ಭದಲ್ಲಿ ಚೌಳೂರು ಮತ್ತು ಪರಶುರಾಂಪುರ ಭಾಗದ ಮೂರು ಕೆರೆಗಳಿಗೆ ನೀರು ಹರಿಸಲು ಉಂಟಾಗಿರುವ ತೊಡಕುಗಳಿಂದ ರೈತರು ಎದುರಿಸುತ್ತಿರುವ



ಸಮಸ್ಯೆಗಳ ಕುರಿತು ಅಹವಾಲುಗಳನ್ನು ಆಲಿಸಿದರು. ನೀರಾವರಿ ಸೌಲಭ್ಯ ದೊರೆಯದೆ ಕೃಷಿ ಚಟುವಟಿಕೆಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ರೈತರು ಸಚಿವರ ಗಮನಕ್ಕೆ ತಂದರು.

ರೈತರ ಸಮಸ್ಯೆಗಳನ್ನು ಆಲಿಸಿದ ಸಚಿವರು, ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ, ನಾಲೆಗೆ ನೀರು ಹರಿಸುವುದಕ್ಕೆ ಎದುರಾಗಿರುವ ಅಡಚಣೆಗಳನ್ನು ಶೀಘ್ರವಾಗಿ ಬಗೆಹರಿಸಬೇಕು. ಚೌಳೂರು ಹಾಗೂ ಪರಶುರಾಂಪುರ ಭಾಗದ ಮೂರು ಕೆರೆಗಳಿಗೆ ನೀರು ಹರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರೈತರ ಹಿತಾಸಕ್ತಿಯನ್ನು ಕಾಪಾಡುವುದು ನಮ್ಮ ಆದ್ಯತೆಯಾಗಿದೆ. ಅನ್ನದಾತರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಿ, ಕೃಷಿ ಚಟುವಟಿಕೆಗಳಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ರೈತರ ನ್ಯಾಯಯುತ ಬೇಡಿಕೆಗಳಿಗೆ ಸ್ಪಂದಿಸಲು ಸದಾ ಬದ್ಧನಾಗಿದ್ದೇನೆ ಎಂದು ಸಚಿವರು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ರೈತ ಮುಖಂಡರು, ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಶಿಕ್ಷಣ ಸಾಮಾಜಿಕ ಸಮಾನತೆ ಮತ್ತು ರಾಷ್ಟ್ರ ನಿರ್ಮಾಣದ ಬಲಿಷ್ಠ ಅಡಿಪಾಯ: ಸಚಿವ ಯು.ಟಿ. ಖಾದರ್

"ಮುಂಜಾನೆಯ ಮೆರಗು"

ಬೆಂಗಳೂರು ನ, 05– ಶಿಕ್ಷಣವು ಕೇವಲ ಜ್ಞಾನಾರ್ಜನೆಯ ಸಾಧನವಲ್ಲ. ಅದು ಸಾಮಾಜಿಕ ಸಮಾನತೆ, ಸಬಲೀಕರಣ ಮತ್ತು ರಾಷ್ಟ್ರ ನಿರ್ಮಾಣದ ಬಲಿಷ್ಠ ಅಡಿಪಾಯವಾಗಿದೆ ಎಂದು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಹೇಳಿದರು.



ಭಾರತ ರತ್ನ ಮೌಲಾನಾ ಅಬುಲ್ ಕಲಾಂ ಆಜಾದ್ ಅವರ ಜನ್ಮದಿನದ ಅಂಗವಾಗಿ ನವೆಂಬರ್ 11ರಂದು ಬೆಳಿಗ್ಗೆ 10 ಗಂಟೆಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ರಾಷ್ಟ್ರೀಯ ಶಿಕ್ಷಣ ದಿನಾಚರಣೆ ಆಯೋಜಿಸಲಾಗಿದೆ. ಈ ಹಿನ್ನೆಲೆಯಲ್ಲಿ ಇಂದು ಪೂರ್ವಭಾವಿ ಸಭೆ ನಡೆಸಿ ಕಾರ್ಯಕ್ರಮದ ಸಿದ್ಧತೆಗಳ ಕುರಿತು ಅಧಿಕಾರಿಗಳಿಗೆ ಅಗತ್ಯ ಸೂಚನೆ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ, ವಿಧಾನಸಭಾಧ್ಯಕ್ಷ ಜಿ.ಎಸ್. ಪಾಟೀಲ್, ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ, ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಸೇರಿದಂತೆ ಹಲವು ಸಚಿವರು, ಶಾಸಕರು ಹಾಗೂ ಗಣ್ಯರು ಭಾಗವಹಿಸಲಿದ್ದಾರೆ.

ರಾಷ್ಟ್ರೀಯ ಶಿಕ್ಷಣ ದಿನಾಚರಣೆಯ ಅಂಗವಾಗಿ ಶಿಕ್ಷಣ ಕ್ಷೇತ್ರದಲ್ಲಿ ಸಾಧನೆ ಮಾಡಿದ ಗಣ್ಯರನ್ನು ಗೌರವಿಸುವುದು, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಹಾಗೂ ಅತ್ಯುತ್ತಮ ಶಿಕ್ಷಕರು ಮತ್ತು ಶಿಕ್ಷಣ ಸಂಸ್ಥೆಗಳಿಗೆ ಪ್ರಶಸ್ತಿ ಪ್ರದಾನ ಸೇರಿದಂತೆ ಹಲವು ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಇದರೊಂದಿಗೆ ಮಕ್ಕಳ ಆರೋಗ್ಯ, ಪೌಷ್ಟಿಕತೆ, ವೈಯಕ್ತಿಕ ಸ್ವಚ್ಛತೆ, ಅಗ್ನಿ ಸುರಕ್ಷತೆ ಮತ್ತು ರಸ್ತೆ ಸುರಕ್ಷತೆ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ವಿಶೇಷ ಜಾಗೃತಿ ಪ್ರದರ್ಶನಗಳನ್ನು ಆಯೋಜಿಸಲಾಗುತ್ತಿದೆ.

ವಿದ್ಯಾರ್ಥಿಗಳಲ್ಲಿ ಶೈಕ್ಷಣಿಕ ಉತ್ಕೃಷ್ಟತೆ, ಸಂವಿಧಾನಿಕ ಮೌಲ್ಯಗಳು ಮತ್ತು ಸಾಮಾಜಿಕ ಜವಾಬ್ದಾರಿಯ ಅರಿವು ಬೆಳೆಸುವುದರ ಜೊತೆಗೆ ಗುಣಮಟ್ಟದ ಶಿಕ್ಷಣದ ಮೂಲಕ ಸಮಾನತೆ ಹಾಗೂ ಸಾಮಾಜಿಕ ಸಬಲೀಕರಣಕ್ಕೆ ಆದ್ಯತೆ ನೀಡುವುದು ಸರ್ಕಾರದ ಉದ್ದೇಶವಾಗಿದೆ ಎಂದು ತಿಳಿಸಿದರು.

ಸರ್ಕಾರಿ ಶಾಲೆಗಳನ್ನು ಖಾಸಗಿಯವರ ಮಡಿಲಿಗೆ ಹಾಕಲು ಕಾಂಗ್ರೆಸ್ ಸರ್ಕಾರ ಮುಂದಾಗಿದೆ: ವಿಜಯೇಂದ್ರ ಆರೋಪ

"ಮುಂಜಾನೆಯ ಮೆರಗು"

ಬೆಂಗಳೂರು ನ, 05– ಸರ್ಕಾರಿ ಶಾಲೆಗಳ ನಿರ್ವಹಣೆ ಮತ್ತು ಶೈಕ್ಷಣಿಕ ವ್ಯವಸ್ಥೆಯನ್ನು ಸಮರ್ಪಕವಾಗಿ ಮುನ್ನಡೆಸಲು ಸಾಧ್ಯವಾಗದ ಕಾಂಗ್ರೆಸ್ ಸರ್ಕಾರ, 'ನಮ್ಮ ಶಾಲೆ ನಮ್ಮ ಜವಾಬ್ದಾರಿ' ಎಂಬ ಹೆಸರಿನಲ್ಲಿ ಸರ್ಕಾರಿ ಶಾಲೆಗಳನ್ನು ಖಾಸಗಿ ಸಂಸ್ಥೆಗಳಿಗೆ ದತ್ತು ನೀಡುವಂತೆ ಮನವಿ ಮಾಡುತ್ತಿರುವುದು ಆಡಳಿತದ ವೈಫಲ್ಯಕ್ಕೆ ಸಾಕ್ಷಿಯಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿರುವ ಅವರು, ಸರ್ಕಾರಿ ಶಾಲೆಗಳಿಗೆ ಖಾಸಗಿ ಶಾಲೆಗಳ ಶಿಕ್ಷಕರನ್ನು ಕಳುಹಿಸಿಕೊಡುವಂತೆ, ಹಳೆಯ ಬಸ್ಸುಗಳನ್ನು ದಾನ ನೀಡುವಂತೆ ಖಾಸಗಿ ವಲಯದ ಮುಂದೆ ಸರ್ಕಾರ ಮನವಿ ಮಾಡುತ್ತಿರುವುದು ಕಳವಳಕಾರಿ ಸಂಗತಿ. ಶಿಕ್ಷಕರಿಗೆ ಸಮರ್ಪಕ ವೇತನ ನೀಡಲು ಹಾಗೂ ಶಾಲೆಗಳಲ್ಲಿ ಅಗತ್ಯ ಮೂಲಸೌಕರ್ಯ ಕಲ್ಪಿಸಲು ಸಾಧ್ಯವಾಗದ ಸ್ಥಿತಿಗೆ ಸರ್ಕಾರ ತಲುಪಿದೆ ಎಂದು ಟೀಕಿಸಿದ್ದಾರೆ.

ಬೆಲೆ ಏರಿಕೆ, ಹೆಚ್ಚುತ್ತಿರುವ ಸಾಲದ ಹೊರೆ ಮತ್ತು ಭ್ರಷ್ಟ ಆಡಳಿತದಿಂದ ರಾಜ್ಯದ ಅಭಿವೃದ್ಧಿ ಕುಂಠಿತವಾಗಿದೆ. ಸರ್ಕಾರಿ ಶಾಲೆಗಳನ್ನು ಖಾಸಗಿಯವರೇ ನಡೆಸುವಂತಹ ಪರಿಸ್ಥಿತಿಯನ್ನು ಸರ್ಕಾರ ನಿರ್ಮಿಸುತ್ತಿದೆ. ಇದೇ ಧೋರಣೆ ಮುಂದುವರಿದರೆ ಸರ್ಕಾರಿ ಆಸ್ಪತ್ರೆ, ಸಾರಿಗೆ ಸೇರಿದಂತೆ ಇತರ ಸಾರ್ವಜನಿಕ ಸೇವೆಗಳನ್ನೂ ಖಾಸಗಿಯವರಿಗೆ ವಹಿಸುವ ದಿನಗಳು ದೂರವಿಲ್ಲ ಎಂದು ವಿಜಯೇಂದ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ (ಸಿಎಸ್‌ಆರ್) ಅಡಿಯಲ್ಲಿ ಖಾಸಗಿ ಸಂಸ್ಥೆಗಳು ಸಮಾಜದ ಅಭಿವೃದ್ಧಿಗೆ ನೆರವಾಗುವುದು ಸ್ವಾಗತಾರ್ಹ. ಆದರೆ, ಸರ್ಕಾರ ತನ್ನ ಮೂಲಭೂತ ಜವಾಬ್ದಾರಿಗಳಿಂದ ಹಿಂದೆ ಸರಿದು ಖಾಸಗಿ ವಲಯದ ನೆರವಿನ ಮೇಲೆ ಅವಲಂಬಿತವಾಗುವುದು ಸರಿಯಲ್ಲ. ರಾಜ್ಯ ಸರ್ಕಾರವೇ ಅಸಹಾಯಕ ಸ್ಥಿತಿಗೆ ತಲುಪಿರುವುದು ಆಡಳಿತದ ವೈಫಲ್ಯವನ್ನು ತೋರಿಸುತ್ತದೆ ಎಂದು ಅವರು ಹೇಳಿದ್ದಾರೆ.

ಗಾಂಧಿ ಭಾರತ ಜೋಡೋ ಯಾತ್ರೆಯ ಅನುಷ್ಠಾನದ ಹೆಸರಿನಲ್ಲಿ ರಾಜ್ಯದ ಆರ್ಥಿಕತೆಯ ಮೇಲೆ ಒತ್ತಡ ಉಂಟುಮಾಡಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧವೂ ವಿಜಯೇಂದ್ರ ಟೀಕಾಪ್ರಹಾರ ನಡೆಸಿದ್ದಾರೆ. ಸರ್ಕಾರದ

ಬರಪೀಡಿತ ರೈತರಿಗೆ 5,000 ಪರಿಹಾರ: ಮೊದಲ ಕಂತಿನ 2,500 ಬಿಡುಗಡೆಗೆ ಚಾಲನೆ

57.93 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿ, 62,481 ಕೋಟಿ ಆರ್ಥಿಕ ನಷ್ಟದ ಅಂದಾಜು

"ಮುಂಜಾನೆಯ ಮೆರಗು"

ಬೆಂಗಳೂರು ನ, 05– ರಾಜ್ಯದಲ್ಲಿ ಬರಗಾಲದಿಂದ ಬೆಳೆ ನಷ್ಟ ಅನುಭವಿಸಿ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ತುರ್ತು ಆರ್ಥಿಕ ನೆರವು ಒದಗಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಪ್ರತಿ ರೈತರಿಗೆ ಗರಿಷ್ಠ ಎರಡು ಹೆಕ್ಟೇರ್ ಮಿತಿಯೊಳಗೆ 5,000 ಬರ ಪರಿಹಾರ ನೀಡಲು ನಿರ್ಧರಿಸಿದೆ. ಇದರ ಮೊದಲ ಕಂತಿನ ಮಧ್ಯಂತರ ಪರಿಹಾರವಾಗಿ 2,500 ಬಿಡುಗಡೆ ಮಾಡುವ ಪ್ರಕ್ರಿಯೆಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ವಿಧಾನಸೌಧದಲ್ಲಿ ಚಾಲನೆ ನೀಡಿದರು.



2026ರ ಮುಂಗಾರು ಅವಧಿಯಲ್ಲಿ ರಾಜ್ಯಾದ್ಯಂತ ತೀವ್ರ ಮಳೆ ಕೊರತೆಯಿಂದ ಕೃಷಿ ಚಟುವಟಿಕೆಗಳು ಹಾಗೂ ಬೆಳೆಗಳ ಮೇಲೆ ಗಂಭೀರ ಪರಿಣಾಮ ಉಂಟಾಗಿದೆ. ರಾಜ್ಯದ ಒಟ್ಟು 240 ತಾಲೂಕುಗಳ ಪೈಕಿ 226 ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಸರ್ಕಾರ ಅಧಿಕೃತವಾಗಿ ಘೋಷಿಸಿದೆ. ಜೂನ್ 1ರಿಂದ ಸೆಪ್ಟೆಂಬರ್ 16ರವರೆಗೆ ರಾಜ್ಯದಲ್ಲಿ 495 ಮಿ.ಮೀ. ಮಳೆಯಾಗಿದ್ದು, ಸಾಮಾನ್ಯವಾಗಿ ಆಗಬೇಕಿದ್ದ 766 ಮಿ.ಮೀ. ಮಳೆಗೆ ಹೋಲಿಸಿದರೆ ಶೇ.35ರಷ್ಟು ಕೊರತೆ ದಾಖಲಾಗಿದೆ.

ಪ್ರಾದೇಶಿಕವಾಗಿ ದಕ್ಷಿಣ ಒಳನಾಡಿನಲ್ಲಿ ಶೇ.47, ಉತ್ತರ ಒಳನಾಡಿನಲ್ಲಿ ಶೇ.42, ಮಲೆನಾಡಿನಲ್ಲಿ ಶೇ.37 ಹಾಗೂ ಕರಾವಳಿ ಕರ್ನಾಟಕದಲ್ಲಿ ಶೇ.27ರಷ್ಟು ಮಳೆ ಕೊರತೆ ಕಂಡುಬಂದಿದೆ. ರಾಜ್ಯದ 31 ಜಿಲ್ಲೆಗಳ ಪೈಕಿ 30 ಜಿಲ್ಲೆಗಳು, 240 ತಾಲೂಕುಗಳ ಪೈಕಿ 226 ತಾಲೂಕುಗಳು ಹಾಗೂ 850 ಹೋಬಳಿಗಳ ಪೈಕಿ 765 ಹೋಬಳಿಗಳಲ್ಲಿ ಮಳೆ ಕೊರತೆ ದಾಖಲಾಗಿದೆ.

ಜಂಟಿ ಬೆಳೆಹಾನಿ ಸಮೀಕ್ಷೆಯ ವರದಿಯ ಪ್ರಕಾರ, ರಾಜ್ಯದಲ್ಲಿ ಒಟ್ಟು 84.10 ಲಕ್ಷ ಹೆಕ್ಟೇರ್ ಬಿತ್ತನೆ ಗುರಿಯಿದ್ದು, ಈ ಪೈಕಿ 69.57 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಬಿತ್ತನೆಯಾದ ಪ್ರದೇಶದಲ್ಲಿ ಅಂದಾಜು 57.93 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದ್ದು, ಇದು ಒಟ್ಟು ಬಿತ್ತನೆ ಪ್ರದೇಶದ ಶೇ.83.26ರಷ್ಟಾಗಿದೆ. ಇದರಿಂದ ರಾಜ್ಯಕ್ಕೆ ಅಂದಾಜು 62,481.88 ಕೋಟಿ ಆರ್ಥಿಕ ನಷ್ಟ ಉಂಟಾಗಿದೆ ಎಂದು ಸರ್ಕಾರ ತಿಳಿಸಿದೆ.

ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯಾ ನಿಧಿ (ಎನ್‌ಡಿಆರ್‌ಎಫ್) ಅಡಿಯಲ್ಲಿ 22,400.58 ಕೋಟಿ ಆರ್ಥಿಕ ನೆರವು ನೀಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ. ಇದರಲ್ಲಿ ಬೆಳೆಹಾನಿ ಇನ್‌ಪುಟ್ ಸಬ್ಸಿಡಿಗೆ 7,943.55 ಕೋಟಿ, ಕುಡಿಯುವ ನೀರಿನ ವ್ಯವಸ್ಥೆಗೆ 1,727 ಕೋಟಿ, ಜಾನುವಾರುಗಳ ರಕ್ಷಣೆಗೆ 583.04 ಕೋಟಿ ಹಾಗೂ 61.91 ಲಕ್ಷ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಅನುಗ್ರಹ ಪರಿಹಾರವಾಗಿ 12,146.99 ಕೋಟಿ ಸೇರಿದೆ.

ಎನ್‌ಡಿಆರ್‌ಎಫ್ ನಿಯಮಗಳನ್ನು ಮರುಪರಿಶೀಲಿಸಿ ಸಡಿಲಗೊಳಿಸುವುದರೊಂದಿಗೆ ರಾಜ್ಯಕ್ಕೆ ಬರ ಪರಿಹಾರದ ಅನುದಾನ ಬಿಡುಗಡೆ ಮಾಡುವಂತೆ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಕೃಷಿ ಸಚಿವರು ಹಾಗೂ ಕೇಂದ್ರ ಗೃಹ ಸಚಿವರಿಗೆ ಐದಕ್ಕೂ ಹೆಚ್ಚು ಬಾರಿ ಪತ್ರ ಬರೆದು ಮನವಿ ಮಾಡಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ಪರಿಹಾರ ವಿತರಣೆಯಲ್ಲಿ ವಿಳಂಬ ಹಾಗೂ ಅಕ್ರಮಗಳನ್ನು ತಡೆಗಟ್ಟಲು ಪರಿಹಾರ ಪೋರ್ಟಲ್, ಡಿಜಿಟಲ್ ಬೆಳೆ ಸಮೀಕ್ಷೆ ಮತ್ತು ಫ್ರೂಟ್ಸ್ (ಈಖಿಗಖಖಿಖ) ದತ್ತಾಂಶಗಳನ್ನು ಒಳಗೊಂಡ ಡಿಜಿಟಲ್ ವ್ಯವಸ್ಥೆ ಅಳವಡಿಸಲಾಗಿದೆ. ಈ ವ್ಯವಸ್ಥೆಯ ಮೂಲಕ ರೈತರು ಸರ್ಕಾರಿ ಕಚೇರಿಗಳಿಗೆ ಅಲೆಯುವ ಅಥವಾ ಭೌತಿಕ ದಾಖಲೆಗಳನ್ನು ಸಲ್ಲಿಸುವ ಅಗತ್ಯವಿಲ್ಲ. ಆಧಾರ್ ಆಧಾರಿತ ನೇರ ನಗದು ವರ್ಗಾವಣೆ (ಡಿಬಿಟಿ) ಮೂಲಕ ಪರಿಹಾರದ ಹಣ ರೈತರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಜಮೆಯಾಗಲಿದೆ.



ಕೇಂದ್ರ ಸರ್ಕಾರದಿಂದ ಇನ್ನೂ ಬರ ಪರಿಹಾರದ ಅನುದಾನ ಬಿಡುಗಡೆಯಾಗದ ಹಿನ್ನೆಲೆಯಲ್ಲಿ ಸದ್ಯಕ್ಕೆ ರಾಜ್ಯ ಸರ್ಕಾರ ತನ್ನ ಸ್ವಂತ ಸಂಪನ್ಮೂಲಗಳಿಂದಲೇ ರೈತರಿಗೆ ಮಧ್ಯಂತರ ಪರಿಹಾರ ನೀಡುತ್ತಿದೆ. ಕೇಂದ್ರದಿಂದ ಅನುದಾನ ಬಿಡುಗಡೆಯಾದ ಕೂಡಲೇ ಬಾಕಿ ಉಳಿದಿರುವ ಪರಿಹಾರದ ಮೊತ್ತವನ್ನು ಪರಿಷ್ಕೃತ ದರಗಳ ಅನ್ವಯ ಒಂದೇ ಕಂತಿನಲ್ಲಿ ಪಾವತಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಭರವಸೆ ನೀಡಿದರು.

ಇದರೊಂದಿಗೆ ಫಸಲ್ ಬಿಮಾ ಯೋಜನೆ ಹಾಗೂ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಗಳ ಅಡಿಯಲ್ಲಿಯೂ ರೈತರಿಗೆ ವಿಮಾ ಪರಿಹಾರವನ್ನು ತ್ವರಿತವಾಗಿ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತಿದೆ. ಈ ಸಂಬಂಧ ಸರ್ವಪಕ್ಷ ನಿಯೋಗದೊಂದಿಗೆ ಪ್ರಧಾನಮಂತ್ರಿಗಳನ್ನು ಭೇಟಿ ಮಾಡಲು ಸಮಯಾವಕಾಶ ಕೋರಲಾಗಿದ್ದು, ಕೇಂದ್ರದ ಪ್ರತಿಕ್ರಿಯೆಗಾಗಿ ಕಾಯಲಾಗುತ್ತಿದೆ ಎಂದು ತಿಳಿಸಿದರು.

ಬರದಿಂದ ಬೆಳೆ ಕಳೆದುಕೊಂಡಿರುವ ರೈತರ ಸಂಕಷ್ಟಕ್ಕೆ ಸ್ಪಂದಿಸುವುದು ಸರ್ಕಾರದ ಆದ್ಯತೆಯಾಗಿದ್ದು, ರೈತರಿಗೆ ಅಗತ್ಯ ಆರ್ಥಿಕ ನೆರವು ತಲುಪಿಸುವ ನಿಟ್ಟಿನಲ್ಲಿ ಪರಿಹಾರ ವಿತರಣೆ ಪ್ರಕ್ರಿಯೆಯನ್ನು ತ್ವರಿತಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

ಬೆಲೆ ಏರಿಕೆ ವಿರುದ್ಧ ಬಿಜೆಪಿ ಬೃಹತ್ ಪ್ರತಿಭಟನೆ: ಕಾಂಗ್ರೆಸ್ ಸರ್ಕಾರದ ವಿರುದ್ಧ ಆರ್. ಅಶೋಕ್ ವಾಗ್ದಾಳಿ

"ಮುಂಜಾನೆಯ ಮೆರಗು"

ಬೆಂಗಳೂರು ನ, 05– ಅಗತ್ಯ ವಸ್ತುಗಳ ಬೆಲೆ ಏರಿಕೆ ಮೂಲಕ ಜನಸಾಮಾನ್ಯರ ಬದುಕು ದುಸ್ತರಗೊಳಿಸುತ್ತಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ನಾಯಕರು ಮೆಜೆಸ್ಟಿಕ್ ಬಸ್ ನಿಲ್ದಾಣದ ಬಳಿ ಬೃಹತ್ ಪ್ರತಿಭಟನೆ ನಡೆಸಿದರು.



ಪ್ರತಿಪಕ್ಷದ ನಾಯಕ ಆರ್. ಅಶೋಕ್ ಹಾಗೂ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಬಿಜೆಪಿ ಶಾಸಕರು, ವಿಧಾನ ಪರಿಷತ್ ಸದಸ್ಯರು, ಪಕ್ಷದ ಪದಾಧಿಕಾರಿಗಳು ಹಾಗೂ ನೂರಾರು ಕಾರ್ಯಕರ್ತರು ಭಾಗವಹಿಸಿ ರಾಜ್ಯ ಸರ್ಕಾರದ ಬೆಲೆ ಏರಿಕೆ ನೀತಿಯನ್ನು ಖಂಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ನಾಯಕರು, ರಾಜ್ಯದಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಸಾಮಾನ್ಯ ಜನರು, ಮಧ್ಯಮ ವರ್ಗದ ಕುಟುಂಬಗಳು ಹಾಗೂ ಬಡವರು ತೀವ್ರ ಸಂಕಷ್ಟ ಎದುರಿಸುವಂತಾಗಿದೆ. ಜನರ ಆರ್ಥಿಕ ಹೊರೆಯನ್ನು ಕಡಿಮೆ ಮಾಡುವ ಬದಲು ಸರ್ಕಾರ ವಿವಿಧ ರೀತಿಯಲ್ಲಿ ಬೆಲೆ ಏರಿಕೆಗೆ ಕಾರಣವಾಗುತ್ತಿದೆ ಎಂದು ಆರೋಪಿಸಿದರು.

ಪ್ರತಿಭಟನೆಯಲ್ಲಿ ಪ್ರತಿಪಕ್ಷ ಉಪನಾಯಕ ಅರವಿಂದ ಬೆಲ್ಲದ್, ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್, ಸಂಸದ ಪಿ.ಸಿ. ಮೋಹನ್, ಶಾಸಕರಾದ ಎಸ್. ರಘು, ರವಿ ಸುಬ್ರಹ್ಮಣ್ಯ, ಸೇರಿದಂತೆ ಇತರರಿದ್ದರು.

ಪ್ರಜಾಪ್ರಭುತ್ವದ ರಕ್ಷಣೆ, ಅರಾಜಕತೆ ವಿರುದ್ಧ ಜಾಗೃತಿ ಶಿವಮೊಗ್ಗದಲ್ಲಿ ಬಿಜೆಪಿಯಿಂದ ಬೃಹತ್ ಪಾದಯಾತ್ರೆ

"ಮುಂಜಾನೆಯ ಮೆರಗು"

ಶಿವಮೊಗ್ಗ ನ, 05– ಪ್ರಜಾಪ್ರಭುತ್ವದ ಮೌಲ್ಯಗಳು ಹಾಗೂ ಸಂವಿಧಾನಬದ್ಧ ವ್ಯವಸ್ಥೆಯ ರಕ್ಷಣೆಯ ಉದ್ದೇಶದಿಂದ ಬಿಜೆಪಿ ಕರ್ನಾಟಕ ವತಿಯಿಂದ ನಗರದಲ್ಲಿ 'ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ' ಎಂಬ ಘೋಷವಾಕ್ಯದಡಿ ಬೃಹತ್ ಪಾದಯಾತ್ರೆ ಆಯೋಜಿಸಲಾಗಿತ್ತು.



ಪಾದಯಾತ್ರೆಯಲ್ಲಿ ಸಂಸದ ಬಿ.ವೈ. ರಾಘವೇಂದ್ರ ಅವರು ಪಕ್ಷದ ಹಿರಿಯ ನಾಯಕರು, ಸಾವಿರಾರು ಕಾರ್ಯಕರ್ತರು ಹಾಗೂ ಸಾರ್ವಜನಿಕರೊಂದಿಗೆ ಹೆಜ್ಜೆ ಹಾಕುವ ಮೂಲಕ ಅಭಿಯಾನಕ್ಕೆ ಸಾಥ್ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಮುಖಂಡರು, ದೇಶದ ಸ್ಥಿರತೆ ಮತ್ತು ಪ್ರಜಾಪ್ರಭುತ್ವ ವ್ಯವಸ್ಥೆಗೆ ಧಕ್ಕೆ ತರುವ ಪ್ರಯತ್ನಗಳ ವಿರುದ್ಧ ಜನರಲ್ಲಿ ಜಾಗೃತಿ ಮೂಡಿಸುವುದು ಅಭಿಯಾನದ ಉದ್ದೇಶವಾಗಿದೆ ಎಂದು ತಿಳಿಸಿದರು. ಕಾಂಗ್ರೆಸ್ ಹಾಗೂ ಅದರ ಮಿತ್ರಪಕ್ಷಗಳ ರಾಜಕೀಯ ನಿಲುವುಗಳ ವಿರುದ್ಧ ಆಕ್ಷೇಪ ವ್ಯಕ್ತಪಡಿಸಿದ ಅವರು, ದೇಶದ ಏಕತೆ, ಸಮಗ್ರತೆ ಮತ್ತು ಸಂವಿಧಾನದ ಆಶಯಗಳನ್ನು ಕಾಪಾಡಲು ಜನರು ಜಾಗೃತರಾಗಿರಬೇಕು ಎಂದು ಕರೆ ನೀಡಿದರು.

ದೇಶದಲ್ಲಿ ಅರಾಜಕತೆ ಸೃಷ್ಟಿಸಲು ಯತ್ನಿಸುತ್ತಿರುವ ಶಕ್ತಿಗಳ ವಿರುದ್ಧ ಹಾಗೂ ರಾಜ್ಯ ಸರ್ಕಾರದ ಜನವಿರೋಧಿ ನೀತಿಗಳ ವಿರುದ್ಧ ಬಿಜೆಪಿಯ ಹೋರಾಟ ಮುಂದುವರಿಯಲಿದೆ ಎಂದು ಸಂಸದ ಬಿ.ವೈ. ರಾಘವೇಂದ್ರ ಹೇಳಿದರು.

ಪಾದಯಾತ್ರೆಯಲ್ಲಿ ಸಾವಿರಾರು ಸಂಖ್ಯೆಯಲ್ಲಿ ಕಾರ್ಯಕರ್ತರು ಭಾಗವಹಿಸಿ ಪಕ್ಷದ ಧ್ವಜಗಳನ್ನು ಹಿಡಿದು ಘೋಷಣೆಗಳನ್ನು ಕೂಗಿದರು. ಪ್ರಜಾಪ್ರಭುತ್ವದ ಮೌಲ್ಯಗಳು, ದೇಶದ ಏಕತೆ ಮತ್ತು ಸಂವಿಧಾನದ ಆಶಯಗಳ ಕುರಿತು ಜನಜಾಗೃತಿ ಮೂಡಿಸುವ ಸಂದೇಶವನ್ನು ಅಭಿಯಾನದ ಮೂಲಕ ಸಾರಲಾಯಿತು.

ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪಾದಯಾತ್ರೆಯನ್ನು ಯಶಸ್ವಿಗೊಳಿಸಿದ ಪಕ್ಷದ ಹಿರಿಯ ನಾಯಕರು, ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಸಾರ್ವಜನಿಕರಿಗೆ ಸಂಸದ ಬಿ.ವೈ. ರಾಘವೇಂದ್ರ ಕೃತಜ್ಞತೆ ಸಲ್ಲಿಸಿದರು.

ಆತ್ಮವಿಶ್ವಾಸ ಮತ್ತು ನಿರಂತರ ಪ್ರಯತ್ನದಿಂದ ಮಾತ್ರ ಜೀವನದಲ್ಲಿ ಸಾಧನೆ ಸಾಧ್ಯ: ಮಂಜುನಾಥ ಕುರ್ಕಿ

"ಮುಂಜಾನೆಯ ಮೆರಗು"

ದಾವಣಗೆರೆ, ನ, 05– ಪ್ರತಿಯೊಬ್ಬರೂ ಆತ್ಮವಿಶ್ವಾಸವನ್ನು ಬೆಳೆಸಿಕೊಂಡು ಮುನ್ನಡೆದಾಗ ಮಾತ್ರ ಜೀವನದಲ್ಲಿ ಏನಾದರೂ ಮಹತ್ತರವಾದ ಸಾಧನೆ ಮಾಡಲು ಸಾಧ್ಯ. ಸಮಸ್ಯೆ ಹಾಗೂ ಸವಾಲುಗಳನ್ನು ಮೆಟ್ಟಿನಿಂತು ಮುನ್ನಡೆಯುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಜಿಲ್ಲಾಧ್ಯಕ್ಷ ಮಂಜುನಾಥ ಕುರ್ಕಿ ಹೇಳಿದರು.

ಗುರುವಾರ ದಾವಣಗೆರೆ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವತಿಯಿಂದ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ವ್ಯಕ್ತಿತ್ವ ವಿಕಸನ ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಪ್ರತಿಯೊಬ್ಬರೂ ಹಿಂಜರಿಕೆ ಮತ್ತು ಕೀಳರಿಮೆಯಿಂದ ಹೊರಬರಬೇಕು. ಸಾಧಕರ ಜೀವನ ಚರಿತ್ರೆಗಳನ್ನು ಓದಿ, ಅವರ ಸಾಧನೆಯ ಹಿಂದಿರುವ ಪರಿಶ್ರಮ, ಆತ್ಮವಿಶ್ವಾಸ ಹಾಗೂ ಛಲವನ್ನು ಅರಿತುಕೊಳ್ಳಬೇಕು. ಪ್ರತಿಯೊಬ್ಬರ ಬದುಕಿನಲ್ಲಿಯೂ ನಾನಾ ರೀತಿಯ ಸಮಸ್ಯೆಗಳು ಎದುರಾಗುವುದು ಸಹಜ. ಆದರೆ ಅವುಗಳಿಗೆ ಹೆದರದೆ ಧೈರ್ಯದಿಂದ



ಎದುರಿಸಿ ಮುನ್ನಡೆಯಬೇಕು. ಸಮಸ್ಯೆ, ಸವಾಲು ಹಾಗೂ ಕಠಿಣ ಪರಿಸ್ಥಿತಿಗಳನ್ನು ದಾಟಿದಾಗ ಮಾತ್ರ ವ್ಯಕ್ತಿತ್ವ ಮತ್ತಷ್ಟು ಸುಂದರವಾಗಿ ರೂಪುಗೊಳ್ಳಲು ಸಾಧ್ಯ ಎಂದರು.

ಜಪಾನ್ ದೇಶದ ಉದಾಹರಣೆ ನೀಡಿದ ಅವರು, ಅಣುಬಾಂಬ್ ದಾಳಿಯಿಂದ ಅಪಾರ ನಾಶನಷ್ಟ ಅನುಭವಿಸಿದರೂ ಅಲ್ಲಿನ ಜನರು ಆತ್ಮವಿಶ್ವಾಸ ಮತ್ತು ಕಠಿಣ ಪರಿಶ್ರಮದಿಂದ ದೇಶವನ್ನು ಪುನರ್‌ನಿರ್ಮಿಸಿ ವಿಶ್ವದ ಪ್ರಬಲ ರಾಷ್ಟ್ರಗಳಲ್ಲಿ ಒಂದನ್ನಾಗಿ ಬೆಳೆಸಿದ್ದಾರೆ. ಅಮೆರಿಕ ಜಪಾನ್‌ನ ಕಟ್ಟಡಗಳನ್ನು ನಾಶಪಡಿಸಿರಬಹುದು, ಆದರೆ ಜಪಾನಿಯರ ಆತ್ಮವಿಶ್ವಾಸವನ್ನು ಕಸಿದುಕೊಳ್ಳಲು ಸಾಧ್ಯವಾಗಲಿಲ್ಲ ಎಂಬ ಸಂದೇಶ ಅಲ್ಲಿನ ಜನರಲ್ಲಿ ಹೊಸ ಚೈತನ್ಯ ತುಂಬಿತು ಎಂದು ವಿವರಿಸಿದರು.

ಹಾಲಿನ ಉದಾಹರಣೆ ನೀಡಿದ ಅವರು, ಹಾಲು ಮೊಸರಾಗಿ, ಮೊಸರು ಮಜ್ಜಿಗೆ ಮತ್ತು ಬೆಣ್ಣೆಯಾಗಿ, ಬೆಣ್ಣೆ ತುಪ್ಪವಾಗಿ ಪರಿವರ್ತನೆಯಾದಂತೆ ಪ್ರತಿಯೊಂದು ಹಂತದಲ್ಲಿಯೂ ಅದರ ಮೌಲ್ಯ ಹೆಚ್ಚಾಗುತ್ತದೆ. ಅದೇ ರೀತಿ ಮನುಷ್ಯನೂ ಜೀವನದ ಸವಾಲುಗಳನ್ನು ಎದುರಿಸುತ್ತಾ ಅನುಭವ ಮತ್ತು ಜ್ಞಾನವನ್ನು ಪಡೆದುಕೊಂಡಾಗ ವ್ಯಕ್ತಿತ್ವದ ಮೌಲ್ಯ ಹೆಚ್ಚುತ್ತದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳು ಸಾಧನೆ ಮಾಡಿದ ಮಹನೀಯರನ್ನು ತಮ್ಮ ಆದರ್ಶ ವ್ಯಕ್ತಿಗಳನ್ನಾಗಿ ಆಯ್ಕೆ ಮಾಡಿಕೊಳ್ಳಬೇಕು. ಕೇವಲ ಸಿನಿಮಾ ನಟರನ್ನು ಆದರ್ಶವಾಗಿಸಿಕೊಳ್ಳುವ ಬದಲು ಸಮಾಜಕ್ಕೆ ಕೊಡುಗೆ ನೀಡಿದ ಸಾಧಕರ ಬದುಕನ್ನು ಮಾದರಿಯಾಗಿಟ್ಟುಕೊಂಡು ಮುನ್ನಡೆಯಬೇಕು ಎಂದು ಸಲಹೆ ನೀಡಿದರು.

ಜಗಳೂರಿನ ನಾರಂದ ಪದವಿ ಪೂರ್ವ ಕಾಲೇಜಿನ ನಿವೃತ್ತ ಉಪನ್ಯಾಸಕ ಸುಭಾಷ್ ಚಂದ್ರ ಬೋಸ್ ಮಾತನಾಡಿ,



ಪತ್ರಿಕೋದ್ಯಮ ವಿದ್ಯಾರ್ಥಿಗಳು ಸದಾ ಜಾಗೃತರಾಗಿರಬೇಕು. ಸಮಾಜದ ಬಹುತೇಕ ಎಲ್ಲ ಕ್ಷೇತ್ರಗಳ ಕುರಿತು ಸಾಮಾನ್ಯ ಜ್ಞಾನ ಹೊಂದಿರಬೇಕು. ಸುದ್ದಿಗಳನ್ನು ಬರೆಯುವಾಗ ವಸ್ತುನಿಷ್ಠತೆಗೆ ಆದ್ಯತೆ ನೀಡುವುದರ ಜತೆಗೆ ವಾಸ್ತವ ಸ್ಥಿತಿಯನ್ನು ಅರಿತು ವರದಿ ಮಾಡುವ ಕೌಶಲ್ಯ ಬೆಳೆಸಿಕೊಳ್ಳಬೇಕು ಎಂದರು.

ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಮುಖ್ಯಸ್ಥ ಶಿವಕುಮಾರ್ ಕಣಸೋಗಿ ಮಾತನಾಡಿ, ಪತ್ರಿಕೋದ್ಯಮ ಕ್ಷೇತ್ರವು ವಿವಿಧ ಕ್ಷೇತ್ರಗಳಲ್ಲಿ ತಮ್ಮದೇ ಆದ ಛಾಪು ಮೂಡಿಸಲು ಉತ್ತಮ ಅವಕಾಶಗಳನ್ನು ಒದಗಿಸುತ್ತದೆ. ಆದರೆ ಕಾಯಕನಿಷ್ಠೆ, ನಿರಂತರ ಶ್ರಮ ಮತ್ತು ಬದ್ಧತೆಯಿಂದ ಕೆಲಸ ಮಾಡಿದಾಗ ಮಾತ್ರ ಯಶಸ್ಸು ಸಾಧಿಸಲು ಸಾಧ್ಯ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ಪತ್ರಿಕೋದ್ಯಮ ವಿಭಾಗದ ಪ್ರಾಧ್ಯಾಪಕರಾದ ವಿನಯ್, ಚಂದ್ರಲೇಖ, ಪಿಎಚ್.ಡಿ ಸಂಶೋಧನಾ ವಿದ್ಯಾರ್ಥಿಗಳು ಹಾಗೂ ಪತ್ರಿಕೋದ್ಯಮ ವಿಭಾಗದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮತದಾನದ ಹಕ್ಕಿನ ರಕ್ಷಣೆಗಾಗಿ ಹೋರಾಟ ನಿರಂತರ: ಫ್ರೀಡಂ ಪಾರ್ಕ್‌ನಲ್ಲಿ 'ಮತ ಉಳಿಸಿ–ದೇಶ ಉಳಿಸಿ' ಬೃಹತ್ ಪ್ರತಿಭಟನೆ

ಮುಖ್ಯ ಚುನಾವಣಾ ಆಯುಕ್ತರ ರಾಜೀನಾಮೆಗೆ ಇಂಡಿಯಾ ಒಕ್ಕೂಟದ ಆಗ್ರಹ

"ಮುಂಜಾನೆಯ ಮೆರಗು"

ಬೆಂಗಳೂರು ನ, 05– ಪ್ರಜಾಪ್ರಭುತ್ವ ವ್ಯವಸ್ಥೆಯ ಬಲವರ್ಧನೆ, ಚುನಾವಣಾ ಪ್ರಕ್ರಿಯೆಯ ಪಾರದರ್ಶಕತೆ ಹಾಗೂ ಪ್ರತಿಯೊಬ್ಬ ನಾಗರಿಕನ ಮತದಾನದ ಹಕ್ಕಿನ ಸಂರಕ್ಷಣೆಗೆ ಆಗ್ರಹಿಸಿ ಇಂಡಿಯಾ ಒಕ್ಕೂಟದ ವಿವಿಧ ರಾಜಕೀಯ ಪಕ್ಷಗಳು ನಗರದ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ ನಡೆಸಿದವು.

'ಮತ ಉಳಿಸಿ–ದೇಶ ಉಳಿಸಿ' (ವೋಟ್ ಬಚಾವೋ–ದೇಶ್ ಬಚಾವೋ) ಘೋಷಣೆಯಡಿ ನಡೆದ ಪ್ರತಿಭಟನೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪಾಲ್ಗೊಂಡು, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿದರು. ಸಂವಿಧಾನದ ಆಶಯಗಳು ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುವ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಧ್ವನಿ ಎತ್ತಬೇಕಿದೆ ಎಂದು ಪ್ರತಿಪಾದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥ

ಧ್ಯಾನ ಮತ್ತು ಸಕಾರಾತ್ಮಕ ಚಿಂತನೆಯಿಂದ ಒತ್ತಡ ನಿರ್ವಹಣೆ ಸಾಧ್ಯ: ಪ್ರೊ. ವೆಂಕಟೇಶ್ ಬಾಬು

"ಮುಂಜಾನೆಯ ಮೆರಗು"

ಜಗಳೂರು ನ, 05– ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ವಿದ್ಯಾರ್ಥಿಗಳು ಶೈಕ್ಷಣಿಕ ಒತ್ತಡ, ಪರೀಕ್ಷಾ ಭಯ, ಉದ್ಯೋಗದ ಅನಿಶ್ಚಿತತೆ ಹಾಗೂ ಕೌಟುಂಬಿಕ ನಿರೀಕ್ಷೆಗಳಿಂದ ವಿವಿಧ ರೀತಿಯ ಮಾನಸಿಕ ಒತ್ತಡಗಳನ್ನು ಎದುರಿಸುತ್ತಿದ್ದಾರೆ. ಇಂತಹ ಒತ್ತಡಗಳನ್ನು ಸಮರ್ಥವಾಗಿ ನಿರ್ವಹಿಸಲು ಧ್ಯಾನ, ಸಕಾರಾತ್ಮಕ ಚಿಂತನೆ ಮತ್ತು ಆತ್ಮವಿಶ್ವಾಸವನ್ನು ಬೆಳೆಸಿಕೊಳ್ಳುವುದು ಅತ್ಯಗತ್ಯ ಎಂದು ಪ್ರೊ. ವೆಂಕಟೇಶ್ ಬಾಬು ಎಸ್. ಅಭಿಪ್ರಾಯಪಟ್ಟರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಜಗಳೂರಿನಲ್ಲಿ ಆಂತರಿಕ ಗುಣಮಟ್ಟ ಭರವಸೆ ಕೋಶ (ಐಕಿಂಅ) ವತಿಯಿಂದ ಆಯೋಜಿಸಿದ್ದ ಅಂತರರಾಷ್ಟ್ರೀಯ ಒತ್ತಡ ನಿರ್ವಹಣಾ ದಿನಾಚರಣೆ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿದರು.

ವಿದ್ಯಾರ್ಥಿಗಳಿಗೆ ಕೇವಲ ಒತ್ತಡ ನಿರ್ವಹಣೆಯ ಸಿದ್ಧಾಂತಗಳನ್ನು ವಿವರಿಸುವುದಷ್ಟೇ ಅಲ್ಲದೆ,



ಪ್ರಾಯೋಗಿಕವಾಗಿ ಧ್ಯಾನಾಭ್ಯಾಸ ಮಾಡಿಸುವ ಮೂಲಕ ಅದರ ಮಹತ್ವವನ್ನು ತಿಳಿಸಿಕೊಟ್ಟರು. ಕೆಲವು ನಿಮಿಷಗಳ ಕಾಲ ಮೌನವಾಗಿ ಕುಳಿತು ಉಸಿರಾಟದ ಮೇಲೆ ಗಮನ ಕೇಂದ್ರೀಕರಿಸುವ ಸರಳ ಧ್ಯಾನವನ್ನು ವಿದ್ಯಾರ್ಥಿಗಳಿಂದ ಮಾಡಿಸಿದರು. ಧ್ಯಾನವು ಮನಸ್ಸಿನ ಚಂಚಲತೆಯನ್ನು ಕಡಿಮೆ ಮಾಡಿ ಏಕಾಗ್ರತೆ, ಆತ್ಮವಿಶ್ವಾಸ ಹಾಗೂ ನಿರ್ಧಾರ ಕೈಗೊಳ್ಳುವ ಸಾಮರ್ಥ್ಯವನ್ನು ಹೆಚ್ಚಿಸಲು ಸಹಕಾರಿಯಾಗಿದೆ ಎಂದರು.

ಮುಂದುವರಿದು ಮಾತನಾಡಿದ ಅವರು, ಪರೀಕ್ಷೆಯ ಭಯ, ಅಂಕಗಳ ಒತ್ತಡ, ಉದ್ಯೋಗದ ಚಿಂತೆ, ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆ ಹಾಗೂ ಇತರರೊಂದಿಗೆ ತಮ್ಮನ್ನು ಹೋಲಿಸಿಕೊಳ್ಳುವ ಪ್ರವೃತ್ತಿ ವಿದ್ಯಾರ್ಥಿಗಳಲ್ಲಿ ಒತ್ತಡಕ್ಕೆ ಪ್ರಮುಖ ಕಾರಣಗಳಾಗಿವೆ. ಒತ್ತಡವನ್ನು ಸಂಪೂರ್ಣವಾಗಿ ತಪ್ಪಿಸಲು ಸಾಧ್ಯವಿಲ್ಲ, ಆದರೆ ಅದನ್ನು ನಿಭಾಯಿಸುವ ಕೌಶಲವನ್ನು ಬೆಳೆಸಿಕೊಳ್ಳಬಹುದು. ಸಮಯ ನಿರ್ವಹಣೆ, ನಿಯಮಿತ ವ್ಯಾಯಾಮ, ಉತ್ತಮ ನಿದ್ರೆ ಮತ್ತು ಸಕಾರಾತ್ಮಕ ಮನೋಭಾವವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮತ್ತೋರ್ವ ಸಂಪನ್ಮೂಲ ವ್ಯಕ್ತಿ ಪ್ರೊ. ಮೌನೇಶ್ ಕೆ.ಪಿ. ಅವರು ವಿದ್ಯಾರ್ಥಿಗಳಲ್ಲಿ ಕಂಡುಬರುವ ಶೈಕ್ಷಣಿಕ ಒತ್ತಡ, ಪರೀಕ್ಷಾ ಆತಂಕ, ಸ್ಪರ್ಧಾತ್ಮಕ ಮನೋಭಾವ ಹಾಗೂ ಪೋಷಕರ ನಿರೀಕ್ಷೆಗಳಿಂದ ಉಂಟಾಗುವ ಮಾನಸಿಕ ಒತ್ತಡದ ಕುರಿತು ಮಾತನಾಡಿದರು. ವಿದ್ಯಾರ್ಥಿಗಳು ತಮ್ಮ ಸಾಮರ್ಥ್ಯದ ಮೇಲೆ ನಂಬಿಕೆ ಇಟ್ಟುಕೊಳ್ಳಬೇಕು. ಸೋಲು ಮತ್ತು ವೈಫಲ್ಯಗಳನ್ನು ಜೀವನದ ಅಂತ್ಯವೆಂದು ಭಾವಿಸದೆ, ಅವುಗಳನ್ನು ಯಶಸ್ಸಿನ ಮೆಟ್ಟಿಲುಗಳೆಂದು ಸ್ವೀಕರಿಸಬೇಕು. ಇತರರೊಂದಿಗೆ ಹೋಲಿಕೆ ಮಾಡಿಕೊಳ್ಳದೆ ತಮ್ಮದೇ ಆದ ಗುರಿಯನ್ನು ರೂಪಿಸಿಕೊಂಡು ಮುನ್ನಡೆಯಬೇಕು. ಮಾನಸಿಕ ಸಮಸ್ಯೆಗಳನ್ನು ಮುಚ್ಚಿಡದೆ ಪೋಷಕರು, ಶಿಕ್ಷಕರು ಹಾಗೂ ಸ್ನೇಹಿತರೊಂದಿಗೆ ಮುಕ್ತವಾಗಿ ಹಂಚಿಕೊಳ್ಳುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಪ್ರೊ. ಲೋಕೇಶ್ ಸಿ.ಎಸ್. ಅವರು ಒತ್ತಡದ ಸ್ವರೂಪ, ಅದರ ಮಾನಸಿಕ



ಹಾಗೂ ದೈಹಿಕ ಪರಿಣಾಮಗಳು ಮತ್ತು ಅವುಗಳನ್ನು ನಿಯಂತ್ರಿಸುವ ಪ್ರಾಯೋಗಿಕ ವಿಧಾನಗಳ ಕುರಿತು ಮಾಹಿತಿ ನೀಡಿದರು. ವಿದ್ಯಾರ್ಥಿಗಳು ತಮ್ಮ ದೈನಂದಿನ ಜೀವನದಲ್ಲಿ ಶಿಸ್ತು, ಸಮಯಪಾಲನೆ ಮತ್ತು ಸಮತೋಲಿತ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು. ಸಣ್ಣಪುಟ್ಟ ಸಮಸ್ಯೆಗಳಿಗೆ ಆತಂಕಪಡುವ ಬದಲು, ಸಮಸ್ಯೆಗಳನ್ನು ಎದುರಿಸುವ ಧೈರ್ಯ ಮತ್ತು ತಾಳ್ಮೆಯನ್ನು ಬೆಳೆಸಿಕೊಳ್ಳಬೇಕು. ಓದು, ವಿಶ್ರಾಂತಿ, ಮನರಂಜನೆ ಹಾಗೂ ವೈಯಕ್ತಿಕ ಆಸಕ್ತಿಗಳಿಗೆ ಸಮಾನ ಆದ್ಯತೆ ನೀಡುವುದರಿಂದ ಒತ್ತಡವನ್ನು ಕಡಿಮೆ ಮಾಡಿಕೊಳ್ಳಬಹುದು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಪ್ರೊ. ಬಸವರಾಜ ಮಹಾಂತೇಶ್, ಪ್ರೊ. ಮುಸೀಬ್, ಪ್ರೊ. ಮಹೇಶ್ ಸೇರಿದಂತೆ ಕಾಲೇಜಿನ ಬೋಧಕ ವರ್ಗದವರು ಉಪಸ್ಥಿತರಿದ್ದರು. ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿ ಧ್ಯಾನಾಭ್ಯಾಸದ ಅನುಭವ ಪಡೆದರು.

ನ.11ರಂದು ವೀರವನಿತೆ ಒನಕೆ ಓಬವ್ವ ಜಯಂತಿ ಅರ್ಥಪೂರ್ಣ ಆಚರಣೆ: ಪಾಲಯ್ಯ

ಅಧಿಕಾರಿಗಳ ಗೈರಿಗೆ ಸಮಾಜದ ಮುಖಂಡರ ಅಸಮಾಧಾನ

"ಮುಂಜಾನೆಯ ಮೆರಗು"

ಜಗಳೂರು, ನ, 05– ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನ.11ರಂದು ವೀರವನಿತೆ ಒನಕೆ ಓಬವ್ವ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಕೈಗೊಳ್ಳಲಾಗುವುದು ಎಂದು ಗ್ರೇಡ್–2 ತಹಶೀಲ್ದಾರ್ ಪಾಲಯ್ಯ ತಿಳಿಸಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಆಯೋಜಿಸಿದ್ದ ಜಯಂತಿಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ಆದೇಶದಂತೆ ವೀರವನಿತೆ ಒನಕೆ ಓಬವ್ವ ಜಯಂತಿಯ ಅಂಗವಾಗಿ ತಾಲೂಕಿನ ಪ್ರತಿಯೊಂದು ಸರ್ಕಾರಿ ಕಚೇರಿಗಳಲ್ಲಿಯೂ ಓಬವ್ವನ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ಸಮರ್ಪಿಸಬೇಕು. ತಾಲೂಕು ಮಟ್ಟದಲ್ಲಿ ನಡೆಯುವ ಜಯಂತಿ ಕಾರ್ಯಕ್ರಮದಲ್ಲಿ ಎಲ್ಲ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಕಡ್ಡಾಯವಾಗಿ ಭಾಗವಹಿಸಬೇಕು. ಜಯಂತಿ ಆಚರಣೆಯಲ್ಲಿ ಯಾವುದೇ ನಿರ್ಲಕ್ಷ್ಯ ತೋರಬಾರದು. ಸರ್ಕಾರದ ಮಾರ್ಗಸೂಚಿಗಳನ್ನು ಪಾಲಿಸದ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಛಲವಾದಿ ಸಮಾಜದ ಗೌರವಾಧ್ಯಕ್ಷ ಹಾಗೂ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಸಿ.ಲಕ್ಷ್ಮಣ್ ಮಾತನಾಡಿ, ಪ್ರತಿವರ್ಷದಂತೆ ಈ ಬಾರಿಯೂ ತಾಲೂಕು ಆಡಳಿತದ ಸಹಕಾರದೊಂದಿಗೆ ಛಲವಾದಿ ಸಮಾಜದವರು ಒಗ್ಗೂಡಿ ವೀರವನಿತೆ ಒನಕೆ ಓಬವ್ವ ಜಯಂತಿಯನ್ನು ಅರ್ಥಪೂರ್ಣವಾಗಿ ಹಾಗೂ ಅದ್ಧೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ. ತಾಲೂಕಿನ ವಿವಿಧ ಗ್ರಾಮಗಳಿಂದ 200ಕ್ಕೂ ಅಧಿಕ ಸಮಾಜದ ಬಂಧುಗಳು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಜಯಂತಿ ಯಶಸ್ವಿಗೆ ಎಲ್ಲರೂ ಸಹಕರಿಸಬೇಕು ಎಂದು ಮನವಿ ಮಾಡಿದರು.

ಅಧಿಕಾರಿಗಳ ಗೈರಿಗೆ ಮುಖಂಡರ ಅಸಮಾಧಾನ

ಜಯಂತಿ ಆಚರಣೆಯ ಪೂರ್ವಭಾವಿ ಸಭೆಗೆ ತಾಲೂಕು ಮಟ್ಟದ ಬಹುತೇಕ ಇಲಾಖೆಗಳ ಅಧಿಕಾರಿಗಳು ಗೈರಾಗಿದ್ದು,



ಬೆರಳೆಣಿಕೆಯಷ್ಟು ಅಧಿಕಾರಿಗಳು ಮಾತ್ರ ಹಾಜರಾಗಿದ್ದರು. ಅಧಿಕಾರಿಗಳ ಬದಲಿಗೆ ವಿವಿಧ ಇಲಾಖೆಗಳ ಸಿಬ್ಬಂದಿ ಸಭೆಯಲ್ಲಿ ಭಾಗವಹಿಸಿರುವುದಕ್ಕೆ ಛಲವಾದಿ ಸಮಾಜದ ಮುಖಂಡರು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಸರ್ಕಾರದ ವತಿಯಿಂದ ಆಚರಿಸುವ ಮಹನೀಯರ ಜಯಂತಿಗಳಿಗೆ ಸಂಬಂಧಿಸಿದ ಪೂರ್ವಭಾವಿ ಸಭೆಗಳಲ್ಲಾದರೂ ಎಲ್ಲ ಇಲಾಖೆಗಳ ಅಧಿಕಾರಿಗಳು ಜವಾಬ್ದಾರಿಯಿಂದ ಭಾಗವಹಿಸಬೇಕು. ಇಂತಹ ಸಭೆಗಳಿಗೆ ಅಧಿಕಾರಿಗಳೇ ಗೈರಾಗುವುದು ಸರಿಯಾದ ಕ್ರಮವಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿ.ಲೋಕ್ಯಾನಾಯ್ಕ, ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕ ವೆಂಕಟೇಶ್, ಕೃಷಿ ಇಲಾಖೆ ಸಹಾಯಕ ನಿರ್ದೇಶಕಿ ಶ್ವೇತಾ, ಬಿಸಿಎಂ ಇಲಾಖೆ ಅಧಿಕಾರಿ ಜಯಪ್ಪ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಅಶೋಕ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ರಾಘವೇಂದ್ರ ಕಲಾಲ್, ತಾಲೂಕು ಆರೋಗ್ಯಾಧಿಕಾರಿ ಡಾ.ವಿಶ್ವನಾಥ್, ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಇಂದು ಕಲ್ಲೇದೇವಪುರದಲ್ಲಿ 3.21 ಕೋಟಿ ವೆಚ್ಚದ

ಬಾಕ್ಸ್ ಚರಂಡಿ ಕಾಮಗಾರಿಗೆ ಭೂಮಿಪೂಜೆ

"ಮುಂಜಾನೆಯ ಮೆರಗು"

ಜಗಳೂರು, ನ, 05– ತಾಲೂಕಿನ ಕಲ್ಲೇದೇವಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರಾಷ್ಟ್ರೀಯ ಹೆದ್ದಾರಿಯ ಸರ್ವಿಸ್ ರಸ್ತೆಯ ಬಳಿ 3.21 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗಲಿರುವ ಆರ್‌ಸಿಸಿ ಬಾಕ್ಸ್ ಚರಂಡಿ ಕಾಮಗಾರಿಗೆ ನ.6ರ ಶುಕ್ರವಾರ ಮಧ್ಯಾಹ್ನ 12 ಗಂಟೆಗೆ ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಭೂಮಿಪೂಜೆ ನೆರವೇರಿಸಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಜಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಬಿ. ದೇವೇಂದ್ರಪ್ಪ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಕಾಂಗ್ರೆಸ್ ಮುಖಂಡರು ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಜಗಳೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಾಷೀರ್ ಅಹಮದ್, ಅರಸೀಕೆರೆ–ಬಿಳಿಚೋಡು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕಂಬತ್ತಳ್ಳಿ ಮಂಜುನಾಥ್, ಕೆಪಿಸಿಸಿ ಪರಿಶಿಷ್ಟ ಪಂಗಡ ವಿಭಾಗದ ಮಾಜಿ ರಾಜ್ಯಾಧ್ಯಕ್ಷ ಕೆ.ಪಿ. ಪಾಲಯ್ಯ, ಕೆಪಿಸಿಸಿ ಪರಿಶಿಷ್ಟ ಪಂಗಡ ವಿಭಾಗದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್, ಕೆಪಿಸಿಸಿ ಸದಸ್ಯ ಕಲ್ಲೇಶ್ ರಾಜ್ ಪಟೇಲ್ ಸೇರಿದಂತೆ ಪಕ್ಷದ ವಿವಿಧ ಘಟಕಗಳ ಪದಾಧಿಕಾರಿಗಳು ಉಪಸ್ಥಿತರಿರಲಿದ್ದಾರೆ.



ಜಗಳೂರು ತಾಲೂಕಿನ ಎರಡೂ ಬ್ಲಾಕ್ ಕಾಂಗ್ರೆಸ್ ಘಟಕಗಳ ಅಧ್ಯಕ್ಷರು, ಉಪಾಧ್ಯಕ್ಷರು, ಪದಾಧಿಕಾರಿಗಳು, ಯುವ ಕಾಂಗ್ರೆಸ್, ಮಹಿಳಾ ಕಾಂಗ್ರೆಸ್ ಹಾಗೂ ವಿವಿಧ ಮುಂಚೂಣಿ ಘಟಕಗಳ ಮುಖಂಡರು, ಮಾಜಿ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಮತ್ತು ಪಟ್ಟಣ ಪಂಚಾಯಿತಿ ಸದಸ್ಯರು ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಜಿಲ್ಲಾ ಕಾಂಗ್ರೆಸ್ ಸಮಿತಿ ಮತ್ತು ಜಗಳೂರು ಕಾಂಗ್ರೆಸ್ ಸಮಿತಿ ಪ್ರಕಟಣೆಯಲ್ಲಿ ಮನವಿ ಮಾಡಿವೆ.

ನೊಂದವರಿಗೆ ಧ್ವನಿಯಾಗಿ, ಅನ್ಯಾಯಕ್ಕೊಳಗಾದವರಿಗೆ ನ್ಯಾಯ ಕೊಡಿಸಲು ಸಂಘಟನೆಗಳು ಶ್ರಮಿಸಲಿ: ಸಂದೇಶ

"ಮುಂಜಾನೆಯ ಮೆರಗು"

ಜಗಳೂರು ನ, 05– ಅಂಬೇಡ್ಕರ್ ಅವರ ಹೆಸರಿನಲ್ಲಿ ಸಾವಿರಾರು ಸಂಘಟನೆಗಳಿವೆ. ಆದರೆ ಸಂಘಟನೆಗಳು ಕೇವಲ ಹೆಸರಿಗೆ ಸೀಮಿತವಾಗದೆ, ಅವರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ನೊಂದವರಿಗೆ ಧ್ವನಿಯಾಗಿ, ಅನ್ಯಾಯಕ್ಕೊಳಗಾದವರಿಗೆ ನ್ಯಾಯ ದೊರಕಿಸಿಕೊಡುವ ನಿಟ್ಟಿನಲ್ಲಿ ಶ್ರಮಿಸಿದಾಗ ಮಾತ್ರ ಸಂಘಟನೆಗಳ ಸ್ಥಾಪನೆಗೆ ನಿಜವಾದ ಅರ್ಥ ಬರುತ್ತದೆ ಎಂದು ಅಂಬೇಡ್ಕರ್ ಸೇವಾ ಸಮಿತಿಯ ರಾಜ್ಯಾಧ್ಯಕ್ಷ ಸಂದೇಶ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಗುರುವಾರ ಅಂಬೇಡ್ಕರ್ ಸೇವಾ ಸಮಿತಿ (ರಿ) ವತಿಯಿಂದ ಹಮ್ಮಿಕೊಂಡಿದ್ದ ಜಗಳೂರು ತಾಲೂಕು ಸಮಿತಿ ರಚನೆ ಹಾಗೂ ಪದಾಧಿಕಾರಿಗಳ ಆಯ್ಕೆ ಸಭೆಯಲ್ಲಿ ಅವರು ಮಾತನಾಡಿದರು.

ಸಮಾಜದಲ್ಲಿ ಶೋಷಣೆ, ಅನ್ಯಾಯ ಹಾಗೂ ಅಸಮಾನತೆಯಿಂದ ನೊಂದಿರುವ ಜನರ ಪರವಾಗಿ ಸಂಘಟನೆಗಳು ನಿರಂತರವಾಗಿ ಕೆಲಸ ಮಾಡಬೇಕು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ಮತ್ತು ಹಕ್ಕುಗಳನ್ನು ದೊರಕಿಸಿಕೊಡುವ



ನಿಟ್ಟಿನಲ್ಲಿ ಸಂಘಟಿತ ಹೋರಾಟ ನಡೆಸಬೇಕು. ಈ ದಿಸೆಯಲ್ಲಿ ರಾಜ್ಯಾಧ್ಯಕ್ಷ ಸಂದೇಶ ಅವರು ಈಗಾಗಲೇ ರಾಜ್ಯಾದ್ಯಂತ ತಮ್ಮದೇ ಆದ ಛಾಪು ಮೂಡಿಸಿದ್ದಾರೆ ಎಂದು ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ಅಂಬೇಡ್ಕರ್ ಸೇವಾ ಸಮಿತಿಯ ಜಿಲ್ಲಾ ಶಾಖೆಯ ಅಧ್ಯಕ್ಷ ಕುಮಾರ್ ಚೀಲೂರು ಅವರ ಅಧ್ಯಕ್ಷತೆಯಲ್ಲಿ ಜಗಳೂರು ತಾಲೂಕು ಘಟಕವನ್ನು ರಚಿಸಿ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ತಾಲೂಕು ಸಮಿತಿ ಅಧ್ಯಕ್ಷರಾಗಿ ಪ್ರದೀಪ್ ಚಿಕ್ಕಮಲ್ಲನಹೊಳೆ, ಉಪಾಧ್ಯಕ್ಷರಾಗಿ ಋಷಬೇಂದ್ರಪ್ಪ, ಸಹಾಯಕ ಅಧ್ಯಕ್ಷರಾಗಿ ಶಿವಣ್ಣ, ಗೌರವಾಧ್ಯಕ್ಷರಾಗಿ ಮಲ್ಲೇಶ್, ಪ್ರಧಾನ ಕಾರ್ಯದರ್ಶಿಯಾಗಿ ಭರಮಸಮುದ್ರ ವಿಲ್ಲೇಶ್, ಖಜಾಂಚಿಯಾಗಿ ರಂದ್ರವಳ್ಳಿ, ಕಾರ್ಯದರ್ಶಿಯಾಗಿ ನಾಗರಾಜ್, ಸಂಘಟನಾ ಕಾರ್ಯದರ್ಶಿಗಳಾಗಿ ಎಂ.ಟಿ.ಬಾಬು ಮತ್ತು ಬಸಣ್ಣ, ಸಾಮಾಜಿಕ ಜಾಲತಾಣ ಪ್ರಚಾರಕರಾಗಿ ನಿಂಗರಾಜ್, ಕಾನೂನು ಸಲಹೆಗಾರರಾಗಿ ವಕೀಲ ಹನುಮಂತಪ್ಪ ಹಾಗೂ ಮಾಧ್ಯಮ ಸಲಹೆಗಾರರಾಗಿ ಎಂ.ರಾಜಪ್ಪ ಅವರನ್ನು ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಗೌರವಾಧ್ಯಕ್ಷ ನೀಲಗಿರಿ ಮಂಜಪ್ಪ, ಜಿಲ್ಲಾ ಕಾರ್ಯದರ್ಶಿ ನವಿಲೇಹಾಳು ಕೃಷ್ಣಪ್ಪ, ಜಿಲ್ಲಾ ಸಂಘಟನಾ ಸಂಚಾಲಕ ಮಹಾಂತೇಶ್, ಹಾಲೇಶ್, ಭರತೇಶ್ ಸೇರಿದಂತೆ ಸಮಿತಿಯ ವಿವಿಧ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.



ಸಾರ್ವಜನಿಕರ ಸಮಸ್ಯೆಗಳಿಗೆ ಶೀಘ್ರ ಸ್ಪಂದನೆ: ಎಂ.ಡಿ. ಕೀರ್ತಿಕುಮಾರ್

"ಮುಂಜಾನೆಯ ಮೆರಗು"

ಜಗಳೂರು ನ, 05– ಕೆಪಿಸಿಸಿ ಪರಿಶಿಷ್ಟ ಪಂಗಡ (ಎಸ್‌ಟಿ) ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್ ಅವರು ಗುರುವಾರ ತಮ್ಮ ಗೃಹ ಕಚೇರಿಗೆ ಆಗಮಿಸಿದ ಜಗಳೂರು ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳ ಸಾರ್ವಜನಿಕರನ್ನು ಭೇಟಿಯಾಗಿ ಅವರ ಕುಶಲೋಪರಿ ವಿಚಾರಿಸಿದರು.



ಈ ಸಂದರ್ಭದಲ್ಲಿ ಕ್ಷೇತ್ರದ ವಿವಿಧ ಭಾಗಗಳಿಂದ ಆಗಮಿಸಿದ್ದ ಸಾರ್ವಜನಿಕರು ತಮ್ಮ ವೈಯಕ್ತಿಕ ಹಾಗೂ ಸ್ಥಳೀಯ ಸಮಸ್ಯೆಗಳನ್ನು ಅವರ ಗಮನಕ್ಕೆ ತಂದು ಮನವಿಗಳನ್ನು ಸಲ್ಲಿಸಿದರು. ಸಾರ್ವಜನಿಕರ ಅಹವಾಲುಗಳನ್ನು ಆಲಿಸಿದ ಕೀರ್ತಿಕುಮಾರ್ ಅವರು, ಸಮಸ್ಯೆಗಳ ಪರಿಹಾರಕ್ಕೆ ಸಂಬಂಧಿಸಿದಂತೆ ಅಗತ್ಯ ಕ್ರಮ ಕೈಗೊಳ್ಳಲು ಪ್ರಯತ್ನಿಸುವುದಾಗಿ ತಿಳಿಸಿ, ಮನವಿಗಳಿಗೆ ಶೀಘ್ರದಲ್ಲೇ ಸ್ಪಂದಿಸುವ ಭರವಸೆ ನೀಡಿದರು.



ಸಾರ್ವಜನಿಕರೊಂದಿಗೆ ಆತ್ಮೀಯವಾಗಿ ಬೆರೆತು ಅವರ ಸಮಸ್ಯೆಗಳನ್ನು ಆಲಿಸುವ ಮೂಲಕ ಜನರೊಂದಿಗೆ ನಿರಂತರ ಸಂಪರ್ಕದಲ್ಲಿರುವುದಾಗಿ ತಿಳಿಸಿದರು.

ಒಂದು ಕೋಟಿಗೂ ಅಧಿಕ ಅನುದಾನದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನ: ಶಾಸಕ ಬಿ. ದೇವೇಂದ್ರಪ್ಪ

"ಮುಂಜಾನೆಯ ಮೆರಗು"

ಜಗಳೂರು ನ, 05– ದೇಶಕ್ಕೆ ಸ್ವಾತಂತ್ರ್ಯ ಬಂದು 79 ವರ್ಷಗಳು ಕಳೆದಿದ್ದರೂ ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿದ್ದ ತಾಲೂಕಿನ ಬೊಮ್ಮಕ್ಕನಹಳ್ಳಿ ಗ್ರಾಮಕ್ಕೆ ಇದೀಗ ಅಭಿವೃದ್ಧಿಯ ಸ್ಪರ್ಶ ದೊರೆಯುತ್ತಿದ್ದು, ಒಂದು ಕೋಟಿಗೂ ಅಧಿಕ ಅನುದಾನ ಒದಗಿಸುವ ಮೂಲಕ ಹಂತ ಹಂತವಾಗಿ ಗ್ರಾಮದ ಸಮಗ್ರ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಶಾಸಕ ಬಿ. ದೇವೇಂದ